# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 71 | SATURDAY 23-05-2026 | PRGI No : KNKAN/26/A0962 | Pages:4 | Rs.2.00 | M: 9742418836


## ಗೃಹಲಕ್ಷ್ಮಿ ಯೋಜನೆಯಲ್ಲಿ 5 ಸಾವಿರ ಕೋಟಿ ಲೂಟಿ: ನಿಖಿಲ್ ಆರೋಪ



ಬೆಂಗಳೂರು: ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲೊಂದಾದ 'ಗೃಹಲಕ್ಷ್ಮಿ' ಹೆಸರಿನಲ್ಲಿ ಭಾರಿ ಅವ್ಯವಹಾರ ನಡೆದಿದೆ ಎಂದು ಜೆಡಿಎಸ್ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಗಂಭೀರ ಆರೋಪ ಮಾಡಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ಇಂದು ನಡೆಸಿ ಮಾತನಾಡಿದ ಅವರು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ್ದಲ್ಲದೆ, ನೇರ ಸವಾಲುಗಳನ್ನು ಎಸೆದಿದ್ದಾರೆ.

ನಿಖಿಲ್ ಸ್ಟೇಟಸ್ ಏನು ಎಂಬ ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಟೀಕೆಗೆ ತಿರುಗೇಟು ನೀಡಿದ ನಿಖಿಲ್, "ನಾನು ಕನ್ನಡ ನಾಡಿನ ಹುಡುಗ, ಇಲ್ಲಿನ ತೆರಿಗೆದಾರ. ನಾಡಿನ ಜನರ ಪರವಾಗಿ ಒಬ್ಬ ಸಾಮಾನ್ಯ ಪ್ರಜೆಯಾಗಿ ಪ್ರಶ್ನೆ ಮಾಡುತ್ತಿದ್ದೇನೆ, ಇದೇ ನನ್ನ ಸ್ಟೇಟಸ್" ಎಂದರು. ಮುಂದುವರಿದು, "ಡಿಸಿಎಂ ಅವರು ಬೇಕಿದ್ದರೆ 'ಕಾಕ್ರೋಜ್ ಪಾರ್ಟಿ'ಗೆ ಅಧ್ಯಕ್ಷರಾಗಲಿ. ಅವರ ನೇತೃತ್ವದಲ್ಲೇ ಪಕ್ಷ ಕಟ್ಟಿ, ಮುಂಬರುವ ಚುನಾವಣೆಯಲ್ಲಿ 50 ಸೀಟುಗಳನ್ನು ಗೆದ್ದು ತೋರಿಸಲಿ ನೋಡೋಣ" ಎಂದು ನೇರ ಸವಾಲು ಹಾಕಿದರು.

ರಾಜ್ಯ ಸರ್ಕಾರದ ವಿರುದ್ಧ ದೊಡ್ಡ ಆರ್ಥಿಕ ಹಗರಣದ ಆರೋಪ ಹೊರಿಸಿದ ನಿಖಿಲ್ ಕುಮಾರಸ್ವಾಮಿ, ಗೃಹಲಕ್ಷ್ಮಿ ಯೋಜನೆಯ ಹಣ ಬಿಡುಗಡೆಯಲ್ಲಿ ತಾರತಮ್ಯ ಎಸಗಲಾಗಿದೆ ಎಂದು ಅಂಕಿ–ಅಂಶಗಳನ್ನು ಮುಂದಿಟ್ಟರು.

**ಅಂಕಿ–ಅಂಶಗಳ ಲೆಕ್ಕಾಚಾರ:** 2024–25ರ ಆರ್ಥಿಕ ವರ್ಷದಲ್ಲಿ ಒಟ್ಟು 1 ಕೋಟಿ 28 ಲಕ್ಷ ಗೃಹಲಕ್ಷ್ಮಿ ಫಲಾನುಭವಿಗಳಿದ್ದಾರೆ. ಬಜೆಟ್‌ನಲ್ಲಿ ನಿಗದಿಪಡಿಸಿದ ಲೆಕ್ಕಾಚಾರದ ಪ್ರಕಾರ ವರ್ಷಕ್ಕೆ 28 ಸಾವಿರ ಕೋಟಿ ರೂ. ವೆಚ್ಚವಾಗಬೇಕಿತ್ತು. ಆದರೆ, ಸರ್ಕಾರ ಕೇವಲ 10 ತಿಂಗಳಿಗೆ ಮಾತ್ರ ಅಂದರೆ 23 ಸಾವಿರ ಕೋಟಿ ರೂ. ಮಾತ್ರ ಜಮಾ ಮಾಡಿದೆ.

**ಕಾಣೆಯಾದ 5 ಸಾವಿರ ಕೋಟಿ ಎಲ್ಲಿದೆ:** 2025ರ ಫೆಬ್ರವರಿ ಮತ್ತು ಮಾರ್ಚ್ ತಿಂಗಳ 2 ಕಂತುಗಳ ಒಟ್ಟು 5 ಸಾವಿರ ಕೋಟಿ ರೂ. ಹಣವನ್ನು ಮಹಿಳೆಯರ ಖಾತೆಗೆ ಹಾಕಿಲ್ಲ. ಆರ್ಥಿಕ ಇಲಾಖೆ ಈ ಹಣ ಬಿಡುಗಡೆ ಮಾಡದಿರುವುದನ್ನು ಸಚಿವರೇ ಸದನದಲ್ಲಿ ಒಪ್ಪಿಕೊಂಡಿದ್ದಾರೆ.

**ಚುನಾವಣೆಗೆ ಬಳಕೆ ಆಯಿತೇ?:** "ಈ 5 ಸಾವಿರ ಕೋಟಿ ರೂ. ಹಣ ಎಲ್ಲಿ ಹೋಯಿತು? ಇದನ್ನು ಚುನಾವಣೆಗೆ ಬಳಕೆ ಮಾಡಿದ್ದೀರಾ ಅಥವಾ ಬೇರೆ ಯಾವುದಕ್ಕೆ ವರ್ಗಾಯಿಸಿದ್ದೀರಾ ಇದಕ್ಕೆ ಮುಖ್ಯಮಂತ್ರಿಗಳೇ ನೇರ ಹೊಣೆ, ಅವರು ಉತ್ತರ ನೀಡಬೇಕು" ಎಂದು ಒತ್ತಾಯಿಸಿದರು.

## ಕನ್ನಡ ಹೋರಾಟಗಾರರ ನೆಪ: ಕೋಮು ಗಲಭೆಕೋರರ ಹಿತಾಸಕ್ತಿಗೆ ಒತ್ತು– ಬಿಜೆಪಿ ಕಿಡಿ!





ಬೆಂಗಳೂರು: ಕರ್ನಾಟಕ ಕಾಂಗ್ರೆಸ್ ಸರ್ಕಾರ ಕನ್ನಡಪರ ಹೋರಾಟಗಾರರ ಕೇಸ್ ಮುಂದಿಟ್ಟುಕೊಂಡು ಕೋಮು ಗಲಭೆಕೋರರ ಖುಲಾಸೆಗೆ ಮುಂದಾಗಿದ್ದು, ತುಷ್ಟೀಕರಣಕ್ಕಾಗಿ ಶ್ರೇಷ್ಠ ಸಂವಿಧಾನ ಮತ್ತು ದೇಶದ ಕಾನೂನನ್ನೇ ಬಲಿ ಕೊಡುತ್ತಿದೆ" ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಕಿಡಿ ಕಾರಿದ್ದಾರೆ.

ರಾಜ್ಯದಲ್ಲಿ ಪ್ರತಿಭಟನೆ–ಗಲಭೆ ಮೇಲಿನ 52 ಕ್ರಿಮಿನಲ್ ಪ್ರಕರಣ ಹಿಂಪಡೆಯಲು ರಾಜ್ಯ ಸಚಿವ ಸಂಪುಟ ನಿರ್ಧರಿಸಿದ್ದು, ಇದು 'ಕನ್ನಡ ಪರ ಹೋರಾಟಗಾರರ ಮೇಲಿನ ಕಾಳಜಿಗಿಂತ ಮುಸ್ಲಿಂ ಗಲಭೆಕೋರರ ಮೇಲಿನ ಹಿತಾಸಕ್ತಿಗಾಗಿ' ಎಂದು ಸಚಿವರು ಆರೋಪಿಸಿದ್ದಾರೆ.

ಗುಲ್ಬರ್ಗ ಜಿಲ್ಲೆ ಆಳಂದ ಮಾತ್ರವಲ್ಲದೆ, ಹುಬ್ಬಳ್ಳಿ ಗಲಭೆ ಪ್ರಕರಣದಲ್ಲೂ ಆರೋಪಿಗಳ ಮೇಲಿನ ಕ್ರಿಮಿನಲ್ ಕೇಸ್ ಹಿಂಪಡೆದ ಕಾಂಗ್ರೆಸ್ ದೇಶಕ್ಕೆ ದೊಡ್ಡ ಗಂಡಾಂತರವಾಗಿ ಪರಿಣಮಿಸಿದೆ ಎಂದಿದ್ದಾರೆ.

ಆಳಂದ ಕೋಮು ಗಲಭೆಯಲ್ಲಿ 100ಕ್ಕೂ ಹೆಚ್ಚು ಆರೋಪಿಗಳ ಮೇಲಿದ್ದ ಕ್ರಿಮಿನಲ್ ಕೇಸ್‌ಗಳನ್ನು ಹಿಂಪಡೆದಿರುವುದು ಅತ್ಯಂತ ಖಂಡನೀಯ. ಕೋಮು ಗಲಭೆ ಸೃಷ್ಟಿಸಿ ಪೊಲೀಸರ ಮೇಲೇ ಮಾರಣಾಂತಿಕ ಹಲ್ಲೆ ನಡೆಸಿದ್ದ ಗುಂಪಿನ ಮೇಲಿನ ಕ್ರಿಮಿನಲ್ ಕೇಸ್ ಹಿಂಪಡೆದ ಕಾಂಗ್ರೆಸ್ ಸರ್ಕಾರದ ತುಷ್ಟೀಕರಣ ಮತ್ತು ಓಲೈಕೆ ರಾಜಕಾರಣ ಎಲ್ಲೆ ಮೀರಿದೆ ಎಂದು ಹರಿಹಾಯ್ದಿದ್ದಾರೆ.

ಕೋಮು ಗಲಭೆ ಸೃಷ್ಟಿಸಿದ್ದ ಉದ್ರಿಕ್ತ ಮುಸ್ಲಿಂ ಯುವಕರ ಗುಂಪು ಧಾರ್ಮಿಕ ಘೋಷಣೆ ಕೂಗುತ್ತ ಪೊಲೀಸರ ಮೇಲೇ ಮಾರಕಾಸ್ತ್ರ ಬೀಸಿದ್ದು, ಪರಿಣಾಮ ಆಖಿಕ ಮತ್ತು ಪೇದೆ ತೀವ್ರ ಗಾಯಗೊಂಡಿದ್ದರು. ಇದ್ಯಾವುದನ್ನೂ ಲೆಕ್ಕಿಸದೆ ಈ ಸರ್ಕಾರ ಇದೀಗ ಕನ್ನಡಪರ ಹೋರಾಟಗಾರರ ಮೇಲಿನ ಕೇಸ್ ಹಿಂಪಡೆಯುವ ನೆಪ ಮುಂದಿಟ್ಟುಕೊಂಡು ಕೋಮು ಗಲಭೆಕೋರರನ್ನೂ ಬಿಡುಗಡೆ ಮಾಡಿರುವುದು ಓಲೈಕೆಯ ಪರಮಾವಧಿ ಎಂದು ಕಿಡಿ ಕಾರಿದ್ದಾರೆ.

**ಗಲಭೆಕೋರರಿಗೆ ಸನ್ಮಾನ ಮಾಡಿದಂತೆ:** ಇದನ್ನೆಲ್ಲಾ ನೋಡಿದರೆ ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಕಾನೂನು ರಕ್ಷಕರಿಗೇ ರಕ್ಷಣೆ ಇಲ್ಲದಾಗಿದೆ ಎಂಬುದು ಸ್ಪಷ್ಟ. ಗಲಭೆಕೋರರನ್ನು ಸರ್ಕಾರ ಸನ್ಮಾನದ ರೀತಿಯಲ್ಲಿ ಬಿಡುಗಡೆ ಮಾಡುತ್ತಿರುವುದು ನಿಜಕ್ಕೂ ದುರಂತ ಎಂದು ಖಂಡಿಸಿದ್ದಾರೆ.

**ಜನರ ಕಣ್ಣಿಗೆ ಮಣ್ಣೆರಚೋ ಯತ್ನ:** ರೈತರು, ಕನ್ನಡಪರ ಹೋರಾಟಗಾರರ ಪ್ರತಿಭಟನೆ ಪ್ರಕರಣಗಳ ಜೊತೆ ಈ ಗಲಭೆಕೋರರ ಕೇಸ್‌ಗಳನ್ನೂ ಸೇರಿಸಿ ಹಿಂಪಡೆದು ಜನರ ಕಣ್ಣಿಗೆ ಮಣ್ಣೆರಚಲು ಯತ್ನಿಸಿದೆ ಎಂದು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಗಲಭೆಕೋರರ ರಕ್ಷಣೆಯೇ ಮುಖ್ಯವಾಯಿತೇ?:** ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಕಾನೂನು ಪಾಲಿಸುವ ಸಾರ್ವಜನಿಕರ ರಕ್ಷಣೆಗಿಂತ ರಾಹುಲ್ ಗಾಂಧಿ ಮತ್ತು ಗಲಭೆಕೋರರ ಓಲೈಕೆಯೇ ಮುಖ್ಯವಾಯಿತೇ? ಎಂದು ಪ್ರಶ್ನಿಸಿರುವ ಜೋಶಿ, ಇದು ತುಷ್ಟೀಕರಣದ ಪರಮಾವಧಿ. ಕರ್ತವ್ಯ ನಿರತ ಪೊಲೀಸರಿಗೇ ರಕ್ಷಣೆ ಇಲ್ಲದಿದ್ದರೆ ಹೇಗೆ? ಇನ್ನು, ರಾಜ್ಯದ ಕಾನೂನು ಸುವ್ಯವಸ್ಥೆ ಗತಿಯೇನು? ಎಂದು ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ.

## ಎಸ್‌ಸಿ, ಎಸ್‌ಟಿ ಕುಂದುಕೊರತೆ ಸಭೆ ಕರೆಯಲು ಡಿವೈಎಸ್‌ಪಿ ಅವರಿಗೆ ಒತ್ತಾಯ



**ಬೆಳಗಾವಿ ವಾರ್ತೆ ಅಥಣಿ:** ತಾಲೂಕಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಸಮಸ್ಯೆಗಳ ಕುರಿತು ಚರ್ಚಿಸಲು ಎಸ್‌ಸಿ,ಎಸ್‌ಟಿ ಕುಂದುಕೊರತೆ ಸಭೆಯನ್ನು ಕೂಡಲೇ ಕರೆಯುವಂತೆ ಅಥಣಿ ಡಿವೈಎಸ್‌ಪಿ ಶ ಪ್ರಶಾಂತ ಮುನ್ನೊಳ್ಳಿ ಅವರಿಗೆ

ಪರಿಶಿಷ್ಟ ಜಾತಿ ಇಲಾಖೆ, ಅಥಣಿ ಬ್ಲಾಕ್ ಕಾಂಗ್ರೆಸ್ ಪರಿಶಿಷ್ಟ ಜಾತಿ ಇಲಾಖೆ ಹಾಗೂ ತಾಲೂಕು ಪಂಚ ಗ್ಯಾರೆಂಟಿ ಯೋಜನೆ ಸದಸ್ಯ ಶಿವಾನಂದ ಸೌದಾಗರ ಅವರು ಡಿವೈಎಸ್‌ಪಿ ಅವರನ್ನು ಭೇಟಿ ಮಾಡಿ ಮನವಿ ಮಾಡಿಕೊಂಡರು

ತಾಲೂಕಿನಲ್ಲಿ ಎಸ್‌ಸಿ,ಎಸ್‌ಟಿ ಸಮುದಾಯಕ್ಕೆ ಸಂಬಂಧಿಸಿದ ದೌರ್ಜನ್ಯ ಪ್ರಕರಣಗಳು, ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ಸರ್ಕಾರದ ಯೋಜನೆಗಳ ಅನುಷ್ಠಾನದಲ್ಲಿ ಆಗುತ್ತಿರುವ ವಿಳಂಬದ ಕುರಿತು ಚರ್ಚಿಸಲು ಸಭೆ ಅಗತ್ಯವಿದೆ ನಿಯಮಿತವಾಗಿ ಸಭೆ ನಡೆಸುವುದರಿಂದ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ ಎಂದು ಶಿವಾನಂದ ಸೌದಾಗರ ಒತ್ತಾಯಿಸಿದರು ಮನವಿ ಆಲಿಸಿದ ಅಥಣಿ ಡಿವೈಎಸ್‌ಪಿ ಪ್ರಶಾಂತ ಮುನ್ನೊಳ್ಳಿ ಅವರು, ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಶೀಘ್ರದಲ್ಲೇ ಸಭೆ ಕರೆಯುವ ಭರವಸೆ ನೀಡಿದರು.

## ಪಂಚ ಗ್ಯಾರಂಟಿಗಳು ದೇಶಕ್ಕೆ ಮಾದರಿ

### ಶಾಸಕ ರಾಜು ಕಾಗೆಯವರ ಹುಟ್ಟು ಹಬ್ಬಕ್ಕೆ ಶುಭಾಶಯ ಕೋರಿದ ಮುಖಂಡರು

**ಬೆಳಗಾವಿ ವಾರ್ತೆ ಮೋಳೆ;** ಕಾಗವಾಡ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಐನಾಪೂರ ಪಟ್ಟಣಕ್ಕೆ ಶಾಸಕ ರಾಜು ಕಾಗೆಯವರು ಕಳೆದ ಮುರು ವರ್ಷಗಳಲ್ಲಿ ನೂರಾರು ಕೋಟಿ ರೂ.ಅನುದಾನ ತಂದು ವಿವಿಧ ಅಭಿವೃದ್ಧಿ ಕಾಮಗಾರಿ ಗಳನ್ನು ಮಾಡಿದ್ದಾರೆ. ಅವರಿಗೆ ಇಂದು 68 ನೇ ಹುಟ್ಟು ಹಬ್ಬವಿದ್ದು ಶುಭಾಶ ಯಗಳನ್ನು ಕೋರುತ್ತೇವೆ ಎಂದು ಐನಾ ಪೂರ ಪಟ್ಟಣ ಪಂಚಾಯತ್ ಸದಸ್ಯರಾದ ಪ್ರವೀಣ ಗಾಣಿಗೇರ, ಅರುಣ ಗಾಣಿಗೇರ, ಸಂಜಯ ಬಿರಡಿ, ಸಂಜಯ ಕುಚನೂರೆ ಹೇಳಿದರು.

ಅವರು ಇಂದು ಐನಾಪೂರ ಪಟ್ಟಣದಲ್ಲಿ ಶಾಸಕ ರಾಜು ಕಾಗೆಯವರ 68 ನೇ ಹುಟ್ಟು ಹಬ್ಬದ ನಿಮಿತ್ಯ ಮುಖ್ಯ ಮಂತ್ರಿಗಳ ವಿಶೇಷ ಅನುದಾನದಡಿ ಮಂಜೂರಾದ ಐನಾಪೂರ–ಕುಡಚಿ ಕೂಡು ರಸ್ತೆ 30 ಲಕ್ಷ ರೂ ಹಾಗೂ ಐನಾಪೂರ–ಕೃಷ್ಣಾ ಕಿತ್ತೂರ ಅನಗಲ್ ರಸ್ತೆ 50 ಲಕ್ಷ ರೂ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡುತ್ತಿದ್ದರು. ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದು ಮುರು ವರ್ಷ ಗತಿಸಿವೆ. ಕಾಂಗ್ರೆಸ್ ಸರಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ತರುವದರಿಂದ ರಾಜ್ಯದ ಬಡವರಿಗೆ ಅನುಕೂಲವಾಗಿದ್ದು, ಈ ಯೋಜನೆ ದೇಶಕ್ಕೆ ಮಾದರಿಯಾಗಿದೆ ಎಂದರು.

ಕಾಂಗ್ರೆಸ್ ಸರಕಾರ ಜಾರಿಗೆ ತಂದಿರುವ ಯೋಜನೆಗಳು ಬಿಟ್ಟಿ ಯೋಜನೆಗಳೆಂದು ವಿರೋದ ಪಕ್ಷಗಳು ಟೀಕಿಸುತ್ತಿದ್ದವು. ಆದರೆ ಈಗ ನಮ್ಮ ಕಾಂಗ್ರೆಸ್ ಪಕ್ಷದ ಯೋಜನೆಗಳನ್ನೇ ಬಿಜೆಪಿ ಪಕ್ಷ ಅಧಿಕಾರದಲ್ಲಿರುವ ರಾಜ್ಯಗಳಲ್ಲಿ ಇದೇ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳನ್ನು ಕಾಪಿ ಮಾಡಿ ಮಾಡಿ ಅಧಿಕಾರಕ್ಕೆ ಬಂದಿದ್ದಾರೆ. ಈಗಾಗಲೇ ಪಶ್ಚಿಮ ಬಂಗಾಳ,.ಆಸ್ಸಾಂ ರಾಜ್ಯದಲ್ಲಿ ಇದೇ ಬಿಜೆಪಿಯವರು ಯೋಜನೆಗಳನ್ನು ಜಾರಿಗೆ ತಂದಿದ್ದಾರೆ ಎಂದ ಅವರು , ಸರಕಾರದ ಗ್ಯಾರಂಟಿ ಯೋಜನೆಗಳನ್ನು ರಾಜ್ಯದಲ್ಲಿ ಬಿಜೆಪಿಯವರು ಪಡೆದುಕೊಳ್ಳುತ್ತಿದ್ದಾರೆ ಎಂದರು

ಈ ವೇಳೆ ಪಟ್ಟಣ ಪಂಚಾಯತ್ ಸದಸ್ಯರಾದ ಪ್ರವೀಣ ಗಾಣಿಗೇರ, ಅರುಣ ಗಾಣಿಗೇರ,ಸಂಜಯ ಬಿರಡಿ, ಸಂಜಯ ಕುಚನೂರೆ, ಕುಮಾರ ಜಯಕರ, ಇಸಾಕ್ ರಾವತ್,ಅಧಿಕಾರಿಗಳಾದ ವೀರಣ್ಣ ವಾಲಿ, ಮಡಿವಾಳ ಪಾಟೀಲ, ಗುತ್ತಿಗೆದಾರ ಬಸವ ರಾಜ ಬಂಗಿ,ಮುಖಂಡರಾದ, ಚಮನ ರಾವ್ ಪಾಟೀಲ, ಸುರೇಶ ಅಡಿಸೇರಿ, ಅರವಿಂದ ಕಾರ್ಚಿ ಸುಭಾಷ ಪಾಟೀಲ, ಗೋಪಾಲರಾವ್ ಕಟ್ಟಿ, ಅಶೋಕ ಅಪರಾಜ, ಸುನೀಲ ಅವಟಿ, ವಿಜಯ ಹರಳೆ, ಗುಂಡು ಖವಟಕೊಪ್ಪ, ಪ್ರವೀಣ ಕುಲಕರ್ಣಿ, ಪ್ರಕಾಶ ಗಾಣಿಗೇರ ಹಣಮಂತ ಮದಾಳೆ, ಮಹಾಲಿಂಗ ಕಮತೆ,ಸೇರಿದಂತೆ ಅನೇಕರು ಇದ್ದರು.



ಮೋಳೆ: ಐನಾಪೂರ ಪಟ್ಟಣದಲ್ಲಿ ಶಾಸಕ ರಾಜು ಕಾಗೆಯವರ ಹುಟ್ಟು ಹಬ್ಬದ ನಿಮಿತ್ಯ ವಿವಿಧ ರಸ್ತೆ ಕಾಮಗಾರಿಗಳಿಗೆ ಪ.ಪಂ.ಸದಸ್ಯರಾದ ಪ್ರವೀಣ ಗಾಣಿಗೇರ,ಅರುಣ ಗಾಣಿಗೇರ, ಸಂಜಯ ಬಿರಡಿ, ಪೂಜೆ ಸಲ್ಲಿಸುತ್ತಿರುವ ಚಿತ್ರ.

"ಶಾಸಕ ರಾಜು ಕಾಗೆಯವರು ಐದು ಬಾರಿ ಶಾಸಕರಾಗಿ ಆಯ್ಕೆಯಾಗಿ ಬಂದಿದ್ದು ಕ್ಷೇತ್ರದಲ್ಲಿ ಹಲವಾರು ಜನಪರ ಕಾರ್ಯಗಳನ್ನು ಮಾಡಿದ್ದಾರೆ. ಅವರಿಗೆ ಸರಕಾರದಲ್ಲಿ ಸಚಿವ ಸ್ಥಾನ ಸಿಗಲಿ, ಈ ಕ್ಷೇತ್ರ ಇನ್ನಷ್ಟು ಅಭಿವೃದ್ಧಿ ಹೊಂದಲಿ ಎಂದು ಹಲವಾರು ಕಾರ್ಯಕರ್ತರು, ಮುಖಂಡರು ಶುಭ ಹಾರೈಸಿದರು."

## ಕಳ್ಳಬಟ್ಟಿ ಸಾರಾಯಿ ಮಾಡುತ್ತಿದ್ದ ಮಹಿಳೆಗೆ ಶಿಕ್ಷೆ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಕಳ್ಳಬಟ್ಟಿ ಸಾರಾಯಿ ಮಾರಾಟ ಮಾಡುತ್ತಿದ್ದ ಮಹಿಳೆಗೆ ಹೆಚ್ಚುವರಿ ದಿವಾಣಿ ಹಾಗೂ ಜೆ.ಎಂ.ಎಫ್.ಸಿ ನ್ಯಾಯಾಲಯ ಒಂದು ವರ್ಷ ಕಠಿಣ ಶಿಕ್ಷೆ ಹಾಗೂ 10 ಸಾವಿರ ರೂ.ಗಳ ದಂಡ ವಿಧಿಸಿ ಆದೇಶ ಹೊರಡಿಸಿದೆ. ಬಾದಾಮಿ ಅಬಕಾರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ಗುಳೇದಗುಡ್ಡ ತಾಲೂಕಿನ ತೋಗುಣಸಿ ತಾಂಡಾದ ಮಂಜುಳಾ ಲಮಾಣಿ ಆರೋಪಿಯಾಗಿದ್ದು, ತೋಗಣಸಿ ತಾಂಡಾದ ಸರಕಾರಿ ಪ್ರಾಥಮಿಕ ಶಾಲೆಯ ಮುಂಭಾಗದಲ್ಲಿ 2 ಲೀಟರನಷ್ಟು ಕಳ್ಳಬಟ್ಟಿ ಸರಾಯಿ ಮಾಡುತ್ತಿದ್ದಾಗ ಬಾದಾಮಿ ಅಬಕಾರಿ ಪೊಲೀಸರು ದಾಳಿ ಮಾಡಿ ಆರೋಪಿ ವಿರುದ್ದ ಅಬಕಾರಿ ನಿರೀಕ್ಷಕ ಆರ್.ಎಸ್.ಮುದಿಗೌಡರ ಪ್ರಕರಣ ದಾಖಲಿಸಿ ದೋಷರೋಪಣೆ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದರು. ಪ್ರಕರಣ ಕೈಗೆತ್ತಿಕೊಂಡ ನ್ಯಾಯಾಲಯ ವಿಚಾರಣೆ ಮಾಡಿದಾಗ ಅಪರಾದ ಎಸಗಿರುವ ಬಗ್ಗೆ ದೃಡಪಟ್ಟಿದ್ದರಿಂದ ಹೆಚ್ಚುವರಿ ದಿವಾನಿ ನ್ಯಾಯಾಲಯದ ನ್ಯಾಯಾಧೀಶ ಹರೀಶ ಜಾಧವ ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32(1)ರ ಅಡಿಯಲ್ಲಿ 1 ವರ್ಷ ಕಠಿಣ ಶಿಕ್ಷೆ ಹಾಗೂ 10 ಸಾವಿರ ರೂ.ಗಳ ದಂಡ ವಿಧಿಸಿ ಆದೇಶ ಹೊರಡಿಸಿದ್ದಾರೆ. ಸರಕಾರದ ಪರವಾಗಿ ಸಹಾಯಕ ಸರಕಾರಿ ಅಭಿಯೋಜಕ ನಯೀಮ ಅಬ್ಬಾಸ ಇದ್ದಗಲಿ ಪ್ರಕರಣರ ನಡೆಸಿ ವಾದ ಮಂಡಿಸಿದ್ದರು.

## ಬಕ್ರೀದ್ ಹಬ್ಬದ ನಿಮಿತ್ಯ ಪೊಲೀಸ್ ಇಲಾಖೆಯಿಂದ ಶಾಂತಿ ಸಭೆ

**ಬೆಳಗಾವಿ ವಾರ್ತೆ ಅಥಣಿ:** ಪೊಲೀಸ್ ಇಲಾಖೆಯು ವತಿಯಿಂದ ಅಥಣಿ ಪೋಲಿಸ್ ಸಮುದಾಯ ಭವನದಲ್ಲಿ ಹಮ್ಮಿಕೊಂಡ ಬಕ್ರೀದ್ ಹಬ್ಬದ ನಿಮಿತ್ಯ ಸಾರ್ವಜನಿಕ ಶಾಂತಿ ಸಭೆ ನಡೆಸಲಾಯಿತು.

ಈ ವೇಳೆ ಅಥಣಿ ಡಿಎಸ್ಪಿ ಪ್ರಶಾಂತ ಮುನ್ನೋಳಿ ಮಾತನಾಡಿ, ಬಕ್ರೀದ್ ಹಬ್ಬವನ್ನು ಎಲ್ಲ ಸಮುದಾಯದವರು ಪರಸ್ಪರ ಸೌಹಾರ್ದತೆಯಿಂದ ಆಚರಿಸಬೇಕು ಸಾರ್ವಜನಿಕ ಸ್ಥಳಗಳಲ್ಲಿ ಪ್ರಾಣಿ ಬಲಿ ನೀಡುವುದು, ಸಂಚಾರಕ್ಕೆ ತೊಂದರೆಯಾಗುವಂತೆ ವರ್ತಿಸುವುದು ಕಾನೂನು ಪ್ರಕಾರ ಅಪರಾಧ ವದಂತಿ ಹಬ್ಬಿಸುವವರು, ಸಾಮಾಜಿಕ ಜಾಲತಾಣದಲ್ಲಿ ಸುಳ್ಳು ಸುದ್ದಿ ಹಂಚುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಕೇಲವು ಕೀಡಗೇಡಿಗಳು ಗೋರಕ್ಷಕರ ಹೆಸರಿನಲ್ಲಿ ಕಾನೂನು ಕೈಗೆತ್ತಿಕೊಳ್ಳುವುದು ಮಾಡಬಾರದು ಎಲ್ಲದಕ್ಕೂ ಕಾನೂನು ಇದೆ ಸರ್ಕಾದರ ನಿಯಮಗಳ ಬಗ್ಗೆ ಉಲ್ಲಂಗನೆಯಾದಲ್ಲಿ ತಮ್ಮ ಗಮನಕ್ಕೆ ಬಂದರೆ ತಾವು ನೈತಿಕ ಪೋಲಿಸ್ ಗಿರಿ ತೋರದೆ ಪೋಲಿಸರಿಗೆ ಮಾಹಿತಿ ನೀಡಬೇಕು ತಪ್ಪು ಕಂಡ ಬಂದರೆ ಪೋಲಿಸ್ ಇಲಾಖೆ ಅಂತವ್ ವಿರುದ್ಧ ಕಠಿಣ ಕಾನೂನ ಕ್ರಮ ಜರುಗಿಸಲಾಗುವುದು ಎಂದು ಹೇಳಿದರು



ಇನ್ನೂ ಪಿಎಸ್‌ಐ ಗಿರಿಮಲ್ಲಪ್ಪ ಉಪ್ಪಾರ ಮಾತನಾಡಿ, ಹಬ್ಬದ ದಿನ ಪ್ರಮುಖ ಮಸೀದಿ, ಈದ್ಗಾ ಮೈದಾನ ಸೇರಿದಂತೆ ಸೂಕ್ಷ್ಮ ಪ್ರದೇಶಗಳಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗುವುದು ಸಾರ್ವಜನಿಕರು ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಿ ಶಾಂತಿ ಕಾಪಾಡಬೇಕು ತುರ್ತು ಸಂದರ್ಭದಲ್ಲಿ 112 ಅಥವಾ ಠಾಣೆಯ ದೂರವಾಣಿ ಸಂಖ್ಯೆಗೆ ಕರೆ ಮಾಡಿ ಎಂದು ಮನವಿ ಮಾಡಿದರು ಸರ್ಕಾರದ ಮಾರ್ಗಸೂಚಿಯಂತೆ ಶಾಂತಿಯುತವಾಗಿ ಹಬ್ಬ ಆಚರಿಸುವುದಾಗಿ ಸಮುದಾಯದ ಮುಖಂಡರು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಅಸ್ಲಮ ನಾಲಬಂದ,ಅಯ್ಯಾಜ್ ಮಾಸ್ಟರ್ ಶಬ್ಬಿರ್ ಸಾತಬಚ್ಚೆ ಮುಂಜು ಹೋಳಿಕಟ್ಟಿ ಶಿವಾ ನಂದ ಸೌದಾಗರ,ಆಶೀಫ ತಾಂಬೋಳ್ಳಿ, ಸಲಾಂಕಲಿ, ರಿಯಾಜ ಸನದಿ,ಜುಬೇರ ನಾಲಬಂದ,ಸಯ್ಯದಮಿನ್ ಗದ್ಯಾಳ, ಸಯ್ಯದ ಗಡ್ಡೇಕರ,ಮಹಾದೇವ ಯಕ್ಕಂಚಿ ಸೇರಿದಂತೆ ಇನ್ನಿತಿತ ಮುಖಂಡರು ಉಪಸ್ಥಿತರಿದ್ದರು.

# ಶೈಕ್ಷಣಿಕ ಅಭಿವೃದ್ಧಿಗಾಗಿ ಎಲ್ಲ ನೌಕರರ ಸಹಕಾರ ಅವಶ್ಯಕ



**ಬೆಳಗಾವಿ ವಾರ್ತೆ ನವಲಗುಂದ:** ತಾಲ್ಲೂಕಿನಲ್ಲಿ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಲು ಮತ್ತು ಶೈಕ್ಷಣಿಕ ಅಭಿವೃದ್ಧಿಗಾಗಿ ಎಲ್ಲ ನೌಕರರು ಸಹಕಾರ ಅವಶ್ಯಕವಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಅರ್ಜುನ ನಾಗಪ್ಪ ಕಂಬೋಗಿ ಹೇಳಿದರು.

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ತಾಲ್ಲೂಕು ಘಟಕದಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು ಸರ್ಕಾರಿ ನೌಕರರ ಮಾನಸಿಕ ಹಾಗೂ ದೈಹಿಕ ಆರೋಗ್ಯದ ದೃಷ್ಟಿಯಿಂದ ಸಂಘದಿಂದ ಮುಂಬರುವ ದಿನಗಳಲ್ಲಿ ನೌಕರರಿಗಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು, ಕ್ರೀಡಾ ಚಟುವಟಿಕೆಗಳನ್ನು ಹಾಗೂ ಸಮಾಜಮುಖಿ ಕಾರ್ಯವಾಗಿ ರಕ್ತದಾನ ಶಿಬಿರವನ್ನು ಏರ್ಪಡಿಸುವಂತೆ ಕರೆ ನೀಡಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ವಿ.ಡಿ.ರಂಗಣ್ಣವರ ಪ್ರಾಸ್ತಾವಿಕವಾಗಿ ಮಾತನಾಡಿ ತಾಲ್ಲೂಕಿಗೆ ನೂತನವಾಗಿ ಆಗಮಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳಾದ ಅರ್ಜುನ ಕಂಬೋಗಿ ಅವರ ಅಧಿಕಾರಾವಧಿಯಲ್ಲಿ ತಾಲೂಕಿನ ಶಿಕ್ಷಣ ಕ್ಷೇತ್ರವು ಮತ್ತಷ್ಟು ಪ್ರಗತಿ ಹೊಂದಲಿ ಹಾಗೂ ನೌಕರರ ಮತ್ತು ಶಿಕ್ಷಕರ ಸಮಸ್ಯೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸುವಂತಾಗಲಿ. ಇಲಾಖೆಯ ಎಲ್ಲಾ ಶೈಕ್ಷಣಿಕ ಕಾರ್ಯಗಳಿಗೆ ಸಂಘವು ಸಂಪೂರ್ಣ ಸಹಕಾರ ನೀಡಲಿದೆ ಎಂದು ಭರವಸೆ ನೀಡಿದರು.

ಸಂಘದ ಕಾರ್ಯದರ್ಶಿ ಎಲ್.ವಾಯ್. ರಾಯಪ್ಪನವರ, ಕೋಶಾಧ್ಯಕ್ಷ ಎನ್.ವಾಯ್.ಕಳಸಾಪೂರ, ಸಾಂಸ್ಕೃತಿಕ ಕಾರ್ಯದರ್ಶಿ ಬಸವರಾಜ ಹೂಗಾರ, ಸಂಘಟನಾ ಕಾರ್ಯದರ್ಶಿ ದೀಪಕ್ ಮುತಾಲಿಕದೇಸಾಯಿ, ಜಿಲ್ಲಾ ದೈಹಿಕ ಶಿಕ್ಷಣ ಸಂಘದ ಅಧ್ಯಕ್ಷ ಆರ್ ಎಚ್.ನೇಗಲಿ ಸೇರಿ ವಿವಿಧ ಇಲಾಖೆಯ ನೌಕರರು ಇದ್ದರು.

# ಬಕ್ರೀದ್ ಹಬ್ಬ; ಶಾಂತಿ ಸಭೆ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದ ಪೊಲೀಸ್ ಠಾಣೆಯಲ್ಲಿ ಬಕ್ರೀದ್ ಹಬ್ಬದ ಅಂಗವಾಗಿ ಪೂರ್ವಭಾವಿಯಾಗಿ ಶಾಂತಿ ಸಭೆಯನ್ನು ಕರೆಯಲಾಗಿತ್ತು.

ಶಾಂತಿ ಸಭೆಯಲ್ಲಿ ಸಿಪಿಐ ಬಿವಿ ನ್ಯಾಮಗೌಡ ಅವರು ಮಾತನಾಡಿ ಹಬ್ಬ ಹರಿದಿನಗಳು ಪರಸ್ಪರ ಬಂಧುತ್ವ ಶಾಂತಿ ಸೌಹಾರ್ದತೆ ಏಕತೆಯನ್ನು ಸಾರುವ ಸಂದೇಶವಾಗಿದ್ದು ಎಲ್ಲರೂ ಒಗ್ಗಟ್ಟಿನಿಂದ ಹಬ್ಬವನ್ನು ಆಚರಿಸಬೇಕು.

ಯಾರೇ ಆಗಿರಲಿ ವಾಟ್ಸಪ್ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಇಲ್ಲಸಲ್ಲದ ಸುದ್ದಿಗಳನ್ನು ಹರಿಬಿಟ್ಟರೆ ಇಲಾಖೆ ಅತ್ಯಂತ ಕಠಿಣ ಕ್ರಮವನ್ನು ಕೈಗೊಳ್ಳಲಿದೆ ಯಾರೊಬ್ಬರೂ ಶಾಂತಿ ನೆಮ್ಮದಿಗೆ ಭಂಗವಾದಂತೆ ಹಬ್ಬವನ್ನು ಆಚರಿಸಬೇಕು ಎಲ್ಲಿಯಾದರೂ ಸಂಶಯ ಕಂಡು ಬಂದರೆ ಕೂಡಲೇ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕು ಇಲಾಖೆ ಹದ್ದು ಕಣ್ಣಿನಿಂದ ನೋಡುತ್ತಿದ್ದು ಪಟ್ಟಣ ಕೋಮು ಸೌಹಾರ್ದತೆ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಎಲ್ಲರೂ ಸಹೋದರರಂತೆ ನಡೆದುಕೊಳ್ಳಬೇಕು ಎಂದರು.

ಪಿಎಸ್ಐ ನಾಗರಾಜಗಡದ ಮಾತನಾಡಿದರು.

ಶಾಂತಿ ಸಭೆಯಲ್ಲಿ ಮುಖಂಡರುಗಳಾದ ಸುಲೇಮಾನ ಕಣಕೆ ಪೂರ್ಣಾಜಿ ಕರಾಟೆ ರಫೀಕ್ ಕಲ್ಬುರ್ಗಿ ಹುಸೇನ್ ಸಾಬ್ ಗುಡೂರ್ ಸಿಆರ್ ಗೋಕಾವಿ ಅಬ್ದುಲ್ ಸಾಬ್ ಬೆಟಗೇರಿ ಹುಸೇನ್ ಸಾಬ್ ಪಟ್ಟಣದ ಇಸ್ಮಾಯಿ ಲ್ ಆಡೂರ್ ಸುರೇಶ ಹಟ್ಟಿ ಡಿ ಬಿ ಫಕೀರಪ್ಪ ಅನಂತ ತೆಲಂಗ ಯೂನಿಶ್ ಚೌರಿ ಎನ್ ಎಂ ಬಾಡಗಿ ನೂರ್ ಅಹಮದ ಮಕಾನದಾರ್ ಖಾಜಾ ಪೀರ್ ಜಮಖಂಡಿ ದಾದಾಪೀರ್ ಕಾರಡಗಿ ಸೇರಿದಂತೆ ಅನೇಕರಿದ್ದರು.

# ಶ್ರೀಮದ್ ಭಾಗವತ ಭುವನದ ಭಾಗ್ಯ



**ಬೆಳಗಾವಿ ವಾರ್ತೆ ಸತ್ತೂರು:** ಶ್ರೀಮದ ಭಾಗವತವು ಮಹೋನ್ನತ ಪುರಾಣವಾಗಿದ್ದು, ಭುವನದ ಭಾಗ್ಯವಾಗಿದೆ. ವೇದವ್ಯಾಸ ದೇವರಿಂದ ರಚಿತವಾದ ಈ ಪುರಾಣವು, ರಚನೆಯ ಕ್ರಮದಲ್ಲಿಯೂ ಕೊನೆಯ ಪುರಾಣ ವಾಗಿದ್ದು, ಅಂತೆಯೇ "ಸಿದ್ದಸ್ತು ಸಿದ್ದಾಂತ" ಎಂಬುದು ಇದರ ಹೆಗ್ಗಳಿಕೆ. ಇದನ್ನು ಉಪದೇಶಿಸಿದ ಶ್ರೀ ಸುಕಾಚಾರ್ಯರು, ಮೃತ್ಯುಂಜಯನಾದ ರುದ್ರ ದೇವರಾಗಿ ದ್ದಾರೆ. ಅವರಿಂದ ಶ್ರವಣ ಮಾಡಿದ ಪರೀಕ್ಷಿತ ಮಹಾರಾಜನು, ಮೃತ್ಯುವನ್ನು ಜಯಿಸಿದನು. ಆದ್ದರಿಂದ ಇದು ಮೃತ್ಯುಂ ಜಯ ಶಾಸ್ತ್ರ ಎಂದು ಡಾ. ಪಂ. ನಾರಾ ಯಣ ಆಚಾರ ಧೂಳಖೇಡ ಹೇಳಿದರು

ಸತ್ತೂರಿನ ನಾರಾಯಣ ಪಾರಾಯಣ ಬಳಗದ ಆಶ್ರಯದಲ್ಲಿ ಜರುಗಿದ ಭಾಗವತ ಸಪ್ತಾಹದಲ್ಲಿ ಭಾಗವಹಿಸಿ ಮಾತನಾಡುತ್ತಾ, ಶ್ರೀಮದ ಭಾಗವತವು ಪ್ರಪಂಚದಲ್ಲಿರುವ ಎಲ್ಲ ಸ್ತರದ ಜೀವಿಗಳಿಗೆ , ಬಾಲಕರಿಗೆ, ಗೃಹಸ್ಥರಿಗೆ , ಸ್ತ್ರೀಯರಿಗೆ, ಸನ್ಯಾಸಿಗಳಿಗೆ ಹೀಗೆ ಎಲ್ಲರಿಗೂ ಬದುಕಿನ ದಿವ್ಯ ಪಾಠ ವನ್ನು ಉಪದೇಶಿಸುವ ಗ್ರಂಥ ಮೊಕ್ಷೋಪಯೋಗಿ ಮಾರ್ಗವನ್ನು ಸಮರ್ಥವಾಗಿ ಬೋಧಿಸುವ ಗ್ರಂಥ. ಆದ್ದರಿಂದ ನಾವು ಸೋಮಾರಿಗಳಾಗದೆ ಶ್ರೀ ಭಾಗವತವನ್ನು ಶ್ರವಣ ಮಾಡಿ ಬದುಕನ್ನು ಸಾರ್ಥಕ ಪಡಿಸಿಕೊಳ್ಳಬೇಕು. ಖಟಾಂಗ ರಾಜ, ಪರೀಕ್ಷಿತ ರಾಜರೇ ಇದಕ್ಕೆ ಪ್ರಮಾಣ. ಈ ಅಧಿಕಮಾಸದಲ್ಲಿ ಈ ಗ್ರಂಥದ ಪಾರಾಯಣ ಶ್ರವಣ, ಮನನ ಮಾಡುವವರು ಶ್ರೀಹರಿಯ ವಿಶೇಷ ಅನುಗ್ರಹಕ್ಕೆ ಪಾತ್ರರಾಗುವುದರಲ್ಲಿ ಸಂದೇಹವಿಲ್ಲ ಎಂದು ಸುಂದರವಾಗಿ ವಿಶ್ಲೇಷಿಸಿದರು.

ರಘೋತ್ತಮ ಅವಧಾನಿ, ಕೃಷ್ಣ ಹುನಗುಂದ, ಅಂಬೇಕರ, ಪ್ರಕಾಶ ದೇಸಾಯಿ, ಡಿ.ಕೆ. ಜೋಶಿ, ಪಾಂಡುರಂಗ ಕುಲಕರಣಿ, ಗೋಪಾಲಕೃಷ್ಣ ಹುನಗುಂದ, ಶ್ರೀನಿವಾಸ ಪಟ್ಟಣಕೊಡಿ, ಎಲ್. ವಿ. ಜೋಶಿ, ಅನಿಲ, ಆನಂದ ದೇಶಪಾಂಡೆ, ಹನುಮಂತ ಬಿಜಾಪುರ, ಡಾ. ರವಿ ಧುಮ್ಮವಾಡ, ಡಾ, ಗಿರೀಶ ಕುಲಕರ್ಣಿ, ವಿನಾಯಕ ಗುರುನಾಥ ಸರ್ದೆಷ್ಮುಖ, ಬಹದ್ದೂರ ದೇಸಾಯಿ ,ಸಂಜೀವ ಗೊಳಸಂಗಿ, ಸಂಜೀವ ಜೋಶಿ ಉಪಸ್ಥಿತರಿದ್ದರು.



**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರು:** ಪಟ್ಟಣದ ಪೊಲೀಸ್ ಠಾಣೆಯಲ್ಲಿ ಭಯೋತ್ಪಾದನೆ ವಿರೋಧಿಸಿ ದಿನಾಚರಣೆ ಜರುಗಿತು. ಪಿಎಸ್ಐ ಪ್ರವೀಣ ಗಂಗೋಳ ಹಾಗೂ ಗಂಗಾಧರ ಹಂಪನ್ನವರ, ಅಧಿಕಾರಿ ಮತ್ತು ಸಿಬ್ಬಂದಿಯವರಿಗೆ ದಿನಾಚರಣೆ ನಿಮಿತ್ಯವಾಗಿ ಪ್ರಮಾಣವಚನ ಬೋಧಿಸಿದರು. ಕಾರ್ಯಕ್ರಮದಲ್ಲಿ ಹಿರಿಯ ಅಧಿಕಾರಿಗಳು, ಹಾಗೂ ಸಿಬ್ಬಂದಿ ಇದ್ದರು.

# ಹೋಟೇಲಗಳ ಪರಿಶೀಲನೆ



**ಬೆಳಗಾವಿ ವಾರ್ತೆ ನವಲಗುಂದ:** ಪುರಸಭೆ ವ್ಯಾಪ್ತಿಯ ಹೋಟೆಲ್ ಹಾಗೂ ಆಹಾರ ಮಂದಿರಗಳ ಮೇಲೆ ಪುರಸಭೆ ಅಧಿಕಾರಿಗಳ ತಂಡ ಮಂಗಳವಾರ ದಿಢೀರ್ ದಾಳಿ ನಡೆಸಿ ಪರಿಶೀಲನೆ ನಡೆಸಿದರು.

ಕಾರ್ಯಾಚರಣೆಯಲ್ಲಿ ಹೋಟೆಲ್ ಅಡುಗೆ ಕೋಣೆ ಹಾಗೂ ಆವರಣ ಅಸ್ವಚ್ಛತೆಯಿಂದ ಕಂಡಿದ್ದು. ಜೊತೆಗೆ ಆಹಾರ ತಯಾರಿಕೆಯಲ್ಲೂ ಶುಚಿತ್ವ ಇಲ್ಲದ್ದನ್ನು ಗಮನಿಸಿದ ಅಧಿಕಾರಿಗಳು ಮಾಲಕರು, ಹೋಟೆಲ್ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡರು.

ಹೊಟೇಲ್‌ನ ಒಳಗೆ ಮತ್ತು ಹೊರಗೆ ಸ್ವಚ್ಛತೆಯನ್ನು ಕಾಯ್ದುಕೊಂಡಿರುವುದಿಲ್ಲ. ಹೊಟೇಲ್ ನಲ್ಲಿ ಶುದ್ಧ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆ ಇರುವುದಿಲ್ಲ. ಇದರಿಂದಾಗಿ ಸಾರ್ವಜನಿಕರಿಗೆ ಅನಾರೋಗ್ಯ ಸಮಸ್ಯೆ ಕಂಡು ಬರುವ ಪರಿಸ್ಥಿತಿಗೆ ನೀವೇ ಕಾರಣವಾಗುತ್ತಿದ್ದೀರಿ ಹೋಟೆಲ್ ಸ್ವಚ್ಛತೆ ಸುಧಾರಿಸದಿದ್ದರೆ. ಕರ್ನಾಟಕ ಪುರಸಭೆ ಅಧಿನಿಯಮ, ಆಹಾರ ಸುರಕ್ಷತಾ ಅಧಿನಿಯಮಗಳ ಅನುಸಾರ ನಿಮ್ಮ ಮೇಲೆ ಕ್ರಮ ಜರುಗಿಸುವುದಾಗಿ ನೋಟಿಸ್ ನೀಡಿ ಪರವಾನಗಿ ರದ್ದುಗೊಳಿಸುವುದಾಗಿ ಎಚ್ಚರಿಕೆ ನೀಡಿದರು.

ಈ ವೇಳೆ ಮುಖ್ಯಾಧಿಕಾರಿ ಎಸ್ ಪಿ ಪೂಜಾರ ಮಾಧ್ಯಮಕ್ಕೆ ಪ್ರತಿಕ್ರಿಯೆ ನೀಡಿ ಹೋಟೆಲ್‌ಗಳಲ್ಲಿ ಶುದ್ಧ ನೀರು ಹಾಗೂ ಆಹಾರ ನೀಡಬೇಕು ಯಾವುದೇ ಕಾರಣಕ್ಕೂ ಗೃಹ ಬಳಕೆಯ ಸಿಲಿಂಡರ್‌ಗಳನ್ನು ಬಳಸಬಾರದು. ಜೊತೆಗೆ ಅಗತ್ಯಕ್ಕಿಂತ ಹೆಚ್ಚಿನ ಸಿಲಿಂಡರ್‌ಗಳನ್ನು ದಾಸ್ತಾನು ಮಾಡಿ ಅಪಾಯಕ್ಕೆ ಆಹ್ವಾನ ನೀಡಬಾರದು ಎಂದು ಎಚ್ಚರಿಕೆ ನೀಡಲಾಗಿದೆ ಎಂದರು.

ಆರೋಗ್ಯ ನಿರೀಕ್ಷಕಿ ಸಾವಿತ್ರಿ ಮುಶನವ್ವರ, ಅನಿಲ್ ಜೋಶಿ ಹಾಗೂ ತಂಡದ ಸದಸ್ಯರು ಇದ್ದರು.



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದ್ದು ಗಡ್ಡದೇವರಮಠ ನಗರದ ನಿವಾಸಿಗರು ಕುಡಿಯುವ ನೀರನ್ನು ಒದಗಿಸುವಂತೆ ಒತ್ತಾಯಿಸಿ ದಿಡೀರ ಪ್ರತಿಭಟನೆ ನಡೆಸಿದರು.

ನಿವಾಸಿಗರು ಕುಡಿಯುವ ನೀರಿಗಾಗಿ ಗಲ್ಲಿ ಗಲ್ಲಿ ಅಡ್ಡಾಡುವ ಸ್ಥಿತಿ ನಿರ್ಮಾಣವಾಗಿದೆ ನಲ್ಲಿಗಳಿದ್ದರೂ ನೀರಿಲ್ಲದ ಸ್ಥಿತಿ ಇದೆ ಎಷ್ಟೊಂದು ದಿವಸ ಹೀಗೆಯೇ ಅನುಭವಿಸುವುದು, ಗಡ್ಡದೇವರಮಠ ನಗರವನ್ನು ಸಂಪೂರ್ಣ ನಿರ್ಲಕ್ಷ ಮಾಡಿದ್ದು ಸಮರ್ಪಕ ನೀರು ಪೂರೈಕೆಗೆ ಕ್ರಮ ಕೈಗೊಳ್ಳದಿದ್ದರೆ ಹೋರಾಟ ಮಾಡುವದಾಗಿ ಎಚ್ಚರಿಸಿದರು.

ಈ ಸಂದರ್ಭದಲ್ಲಿ ವಿರುಪಾಕ್ಷಪ್ಪ ಹಡಪದ ಮಂಜುನಾಥ್ ಬಳಗಾನೂರ ಭಾಷಾ ಸಾಬ್ ಬೂದಿಹಾಳ ಕಿರಣ್ ಬಳಗಾನೂರ ಎ.ಎ ಬಹದ್ದೂರ ವೈ ಎಂ ನಾಲಬಂದ ಚನ್ನವ್ವ ಕಮತದ ಸಾಹೇರಾಗುಡಿಗೇರಿ ನಿರ್ಮಲ ಹೊಸಮನಿ ಮಲ್ಲವ್ವ ಗಡದವರ ಸೇರಿದಂತೆ ಅನೇಕರಿದ್ದರು.

# ಕಾಲುವೆಗಳಿಗೆ ನೀರು ಹರಿವು: ರೈತರ ಮುಖದಲ್ಲಿ ಸಂಭ್ರಮ

## ಶಾಸಕ ನಾಡಗೌಡರ ಕಾರ್ಯಕ್ಕೆ ಗ್ರಾಮೀಣ ಭಾಗದಲ್ಲಿ ಮೆಚ್ಚುಗೆ




**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಲೂಕಿನ ಚಿಮ್ಮಲಗಿ ಏತನೀರಾವರಿ ಪಶ್ಚಿಮ ಕಾಲುವೆ ಹಾಗೂ ಎಎಲ್‌ಬಿಸಿ ಕಾಲುವೆಗಳಿಗೆ ಸೋಮವಾರ ರಾತ್ರಿಣಟಿಜಜಜಿಟಜಜನಿಂದ ನೀರು ಹರಿಸಲಾಗುತ್ತಿದ್ದು, ನೀರು ಬರುತ್ತಿದ್ದಂತೆ ರೈತರು ಹಾಗೂ ಗ್ರಾಮಸ್ಥರಲ್ಲಿ ಹರ್ಷದ ವಾತಾವರಣ ನಿರ್ಮಾಣವಾಗಿದೆ. ಶಾಸಕ ಸಿ.ಎಸ್. ನಾಡಗೌಡರ ಪ್ರಯತ್ನದಿಂದ ನೀರು ಹರಿದು ಬಂದಿದ್ದು, ರೈತರು ಅವರ ಕಾರ್ಯವನ್ನು ಶ್ಲಾಘಿಸಿದ್ದಾರೆ.

ಮಂಗಳವಾರ ವಿವಿಧ ಗ್ರಾಮಗಳ ರೈತರು ತಂಡೋಪ ತಂಡವಾಗಿ ಕಾಲುವೆ ಪ್ರದೇಶಗಳಿಗೆ ತೆರಳಿ ನೀರಿನ ಹರಿವನ್ನು ವೀಕ್ಷಿಸಿದರು. ಚಿಮ್ಮಲಗಿ ಏತನೀರಾವರಿ ಯೋಜನೆ ಹಾಗೂ ಎಎಲ್‌ಬಿಸಿ ಯೋಜನೆಗೆ ವಿದ್ಯುತ್ ಪ್ರಸರಣದ ಟವರ್ ಕುಸಿತದಿಂದಾಗಿ ನೀರು ಹರಿವಿನಲ್ಲಿ ವ್ಯತ್ಯಯ ಉಂಟಾಗಿತ್ತು. ಇದರಿಂದ ರೈತರು, ಜಾನುವಾರುಗಳು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ತೀವ್ರ ನೀರಿನ ಸಮಸ್ಯೆ ಎದುರಿಸಲಾಗುತ್ತಿತ್ತು. ಹನಿ ನೀರಿಗೂ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿತ್ತು.

ಈ ಸಮಸ್ಯೆ ಮನಗಂಡ ಶಾಸಕ ಅಪ್ಪಾಜಿ ನಾಡಗೌಡರು ಹೆಸ್ಕಾಂ ಹಾಗೂ ಕೆಪಿಟಿಸಿಎಲ್ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿ ತಕ್ಷಣ ಸಮಸ್ಯೆ ಪರಿಹರಿಸುವಂತೆ ಸೂಚಿಸಿದ್ದರು. ಜೊತೆಗೆ ವಿದ್ಯುತ್ ಸಮಸ್ಯೆ ಸರಿಯಾದ ಕೂಡಲೇ ಕಾಲುವೆಗಳಿಗೆ ನೀರು ಹರಿಸುವಂತೆ ಕೆಬಿಜೆಎನ್‌ಎಲ್ ಅಧಿಕಾರಿಗಳ ಮೇಲೂ ಒತ್ತಡ ಹೇರಿದ್ದರು ಎನ್ನಲಾಗಿದೆ.

ಶಾಸಕರ ಸೂಚನೆಯಂತೆ ಕಾಲುವೆಗಳಿಗೆ ನೀರು ಹರಿದು ಬಂದ ಪರಿಣಾಮ ರೈತರ ಮುಖದಲ್ಲಿ ಮಂದಹಾಸ ಮೂಡಿದೆ. ಬಸರಕೋಡ, ಅರೇಶಂಕರ, ಸರೂರು, ಶಿರೋಳ, ಹೊಕ್ರಾಣಿ, ಕವಡಿಮಟ್ಟಿ, ಹಗರಗುಂಡ, ಹುಲಗಬಾಳ, ಜಕ್ಕೇರಾಳ, ಇಂಗಳಗೇರಿ, ತಮದಡ್ಡಿ ಸೇರಿದಂತೆ 20ಕ್ಕೂ ಹೆಚ್ಚು ಗ್ರಾಮಗಳ ಕೆರೆಗಳನ್ನು ತುಂಬಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಈ ಬಾರಿ ಸಮರ್ಪಕ ಮಳೆಯಾಗದೆ ಅಂತರ್ಜಲ ಮಟ್ಟ ಕುಸಿದಿದ್ದು, ಕೊಳವೆ ಬಾವಿ ಹಾಗೂ ತೆರೆದ ಬಾವಿಗಳಲ್ಲಿ ನೀರಿನ ಕೊರತೆ ಉಂಟಾಗಿದೆ. ಪರಿಣಾಮ ತೋಟಗಾರಿಕಾ ಬೆಳೆಗಳು ಒಣಗುವ ಪರಿಸ್ಥಿತಿ



ನಿರ್ಮಾಣವಾಗಿತ್ತು. ಇದೀಗ ಕಾಲುವೆ ಹಾಗೂ ಹಳ್ಳಗಳಿಗೆ ನೀರು ಹರಿಸಲಾಗುತ್ತಿರುವುದರಿಂದ ಬಾಂದಾರಗಳಲ್ಲಿ ನೀರು ನಿಲ್ಲಲಿದ್ದು, ಸಮೀಪದ ಜಮೀನುಗಳಿಗೆ ಅನುಕೂಲವಾಗಲಿದೆ ಎಂದು ರೈತರು ತಿಳಿಸಿದ್ದಾರೆ. **ರೈತರ ಪ್ರತಿಕ್ರಿಯೆ:** "ಕಾಲುವೆಗಳಿಗೆ ನೀರು ಹರಿಸಿರುವುದು ರೈತರಿಗೆ ಜೀವದಾನವಾ ದಂತಾಗಿದೆ. ಜಾನುವಾರುಗಳಿಗೂ ಕುಡಿ ಯುವ ನೀರಿನ ಸಮಸ್ಯೆ ಕಡಿಮೆಯಾ ಗಲಿದೆ," ಎಂದು ರೈತರು ಸಂತಸ ವ್ಯಕ್ತಪಡಿಸಿದ್ದಾರೆ.

# ಇ-ಫಾರ್ಮಸಿ ವಿರುದ್ಧ ಔಷಧ ವ್ಯಾಪಾರಿಗಳ ಸರಕಾರ ವಿರುದ್ಧ ಆಕ್ರೋಶ

## ದೇಶವ್ಯಾಪಿ ಬಂದ್‌ಗೆ ಬೆಂಬಲ ಸೂಚಿಸಿ ತಹಸೀಲ್ದಾರರಿಗೆ ಮನವಿ

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ದೇಶದಲ್ಲಿ ಅನಧಿಕೃತ ಇ-ಫಾರ್ಮಸಿಗಳ ಹೆಚ್ಚುತ್ತಿರುವ ಚಟುವಟಿಕೆ ಹಾಗೂ ದೊಡ್ಡ ಕಾರ್ಪೊರೇಟ್ ಕಂಪನಿಗಳ ಅತಿಯಾದ ರಿಯಾಯಿತಿ ದರ ನೀತಿಯಿಂದ ಸಣ್ಣ ಮತ್ತು ಮಧ್ಯಮ ಮಟ್ಟದ ಔಷಧ ವ್ಯಾಪಾರಿಗಳಿಗೆ ತೀವ್ರ ಹಾನಿಯಾಗುತ್ತಿದೆ ಎಂದು ವಿಜಯಪುರ ಜಿಲ್ಲಾ ಕೆಮಿಸ್ಟ್ ಮತ್ತು ಡ್ರಗಿಸ್ಟ್ ಅಸೋಸಿಯೇಷನ್ ಜಿಲ್ಲಾ ಅಧ್ಯಕ್ಷ ಕೆ.ಆರ್. ಎತ್ತಿನಮನಿ ಆತಂಕ ವ್ಯಕ್ತಪಡಿಸಿದರು.

ತಾಲೂಕಾ ಔಷಧ ವ್ಯಾಪಾರಸ್ಥರ ಸಂಘದ ವತಿಯಿಂದ ದೇಶವ್ಯಾಪಿ ಒಂದು ದಿನದ ಔಷಧ ವ್ಯಾಪಾರ ಬಂದ್‌ಗೆ ಬೆಂಬಲ ಸೂಚಿಸಿ ಬುಧವಾರ ತಹಸೀಲ್ದಾರ ಕೀರ್ತಿ ಚಾಲಕ್ ಅವರಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು.



ವಿಜಯಪುರ ಜಿಲ್ಲಾ ಕೆಮಿಸ್ಟ್ ಮತ್ತು ಡ್ರಗಿಸ್ಟ್ ಅಸೋಸಿಯೇಷನ್, ಕರ್ನಾಟಕ ಕೆಮಿಸ್ಟ್ ಮತ್ತು ಡ್ರಗಿಸ್ಟ್ ಅಸೋಸಿಯೇಷನ್ ಹಾಗೂ ಆಲ್ ಇಂಡಿಯಾ ಆರ್ಗನೈಸೇಶನ್ ಆಫ್ ಕೆಮಿಸ್ಟ್ ಅಂಡ್ ಡ್ರಗಿಸ್ಟ್ ಸಂಘಟನೆಗಳ ಕರೆ ಮೇರೆಗೆ ಮೇ 20ರಂದು ದೇಶವ್ಯಾಪಿ ಒಂದು ದಿನದ ಬಂದ್‌ಗೆ ಬೆಂಬಲ ನೀಡಲಾಗುತ್ತಿದೆ ಎಂದು ತಿಳಿಸಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಔಷಧ ವ್ಯಾಪಾರ ಮತ್ತು ಸಾರ್ವಜನಿಕ ಆರೋಗ್ಯಕ್ಕೆ ಸಂಬಂಧಿಸಿದ ಸಮಸ್ಯೆಗಳು ಇನ್ನೂ ಪರಿಹಾರವಾಗಿಲ್ಲ. ದೇಶದಾದ್ಯಂತ 12.40 ಲಕ್ಷಕ್ಕೂ ಅಧಿಕ ಔಷಧ ವ್ಯಾಪಾರಿಗಳು ಹಾಗೂ ಅವರ ಅವಲಂಬಿತರ ಜೀವನೋಪಾಯ ಸಂಕಷ್ಟಕ್ಕೆ ಸಿಲುಕಿದೆ ಎಂದು ಹೇಳಿದರು.

ಈ ವೇಳೆ ತಾಲೂಕ ಅಧ್ಯಕ್ಷ ಜಗದೀಶ್ ಹಿರೇಮಠ ಮಾತನಾಡಿ, ಅನಧಿಕೃತ ಇ-ಫಾರ್ಮಸಿಗಳ ಕಾರ್ಯಾಚರಣೆಯನ್ನು ತಡೆಗಟ್ಟಬೇಕು, 28-08-2018ರ ಜಿ.ಎಸ್.ಆರ್. 817(ಇ) ಅಧಿಸೂಚನೆಯನ್ನು ಹಿಂತೆಗೆದುಕೊಳ್ಳಬೇಕು ಹಾಗೂ ಸಾಂಪ್ರದಾಯಿಕ ಔಷಧ ವಿತರಣಾ ವ್ಯವಸ್ಥೆಯನ್ನು ರಕ್ಷಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ ಎಂದರು.

ಉಪಾಧ್ಯಕ್ಷೆ ಕವಿತಾ ಪಾಟೀಲ, ಜಿಲ್ಲಾ ಕಾರ್ಯದರ್ಶಿ ಶಿವು ಸಿದ್ದಾಪುರ, ಗೌರವ ಕಾರ್ಯದರ್ಶಿ ಇಲಿಯಾಸ್ ಮಾಗಿ, ಸೋಮನಗೌಡ ಬಿರಾದಾರ, ರವಿ ಐಹೊಳಿ, ಮಲ್ಲಿಕಾರ್ಜುನ ಓತಗೇರಿ, ಮಂಜುನಾಥ ಹಿರೇಮಠ, ದಿನೇಶ್ ಲೋಕರೆ, ಎಚ್.ಎಸ್. ಪಾಟೀಲ, ಕುಮಾರಸ್ವಾಮಿ ಶಿವಯೋಗಿಮಠ, ಗೌರಿಶಂಕರ ಹಿರೇಮಠ, ಶಬ್ಬೀರ್ ದೇಗಿನಾಳ, ಸಚಿನ್ ತೊಂಡಿಹಾಳ, ಶಬ್ಬೀರ್ ಮಿರ್ಜಾ, ಮಹೇಂದ್ರಕರ ದತ್ತು, ಸಂಗಮೇಶ ಸಿದ್ದಾಪುರ, ಮಹೇಶ ಸಿದ್ದಾಪುರ, ತನ್ವೀರ್ ನಾಲಬಂದ, ಸಮೀರ್ ಕೇಶಾಪುರ, ರೂಪಾ ಗಂಗಾಧರ ಪತ್ತಾರ, ಪಾಂಡುರಂಗ ತೋರತ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# 52 ಕ್ರಿಮಿನಲ್ ಪ್ರಕರಣಗಳು ವಾಪಸ್: ಮೂಗಿಗೆ ತುಪ್ಪ ಹಚ್ಚೋದು ಅಂದ್ರೆ ಇದೇನಾ? ಸರ್ಕಾರ ನಮಗೆ ಯಾವ ಸಂದೇಶ ನೀಡುತ್ತಿದೆ..?; ಕರವೇ ಪ್ರಶ್ನೆ



**ಬೆಳಗಾವಿ ವಾರ್ತೆ ಬೆಂಗಳೂರು:** ರಾಜ್ಯ ಸಚಿವ ಸಂಪುಟ ಕೆಲವು ಪ್ರಕರಣಗಳನ್ನು ಹಿಂಪಡೆಯಲು ಕೈಗೊಂಡ ನಿರ್ಧಾರದ ಬಗ್ಗೆ ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಮಾಧ್ಯಮ ವರದಿಗಳನ್ನು ಉಲ್ಲೇಖಿಸಿ ಪ್ರತಿಕ್ರಿಯೆ ನೀಡಿರುವ ಅವರು, ನಾಮಕಾವಸ್ತೆಗೆ ಎರಡು ಪ್ರಕರಣಗಳನ್ನು ಹಿಂಪಡೆದಿದ್ದಾರೆ. ಮೂಗಿಗೆ ತುಪ್ಪ ಹಚ್ಚೋದು ಅಂದ್ರೆ ಇದೇನಾ? ಆ ಎರಡು ಪ್ರಕರಣಗಳನ್ನಾದರೂ ಯಾಕೆ ಹಿಂಪಡೆದಿರಿ ಎಂದು ಸರ್ಕಾರಕ್ಕೆ ಪ್ರಶ್ನೆ ಮಾಡಿದ್ದಾರೆ.

ರಾಜ್ಯ ಸರ್ಕಾರದ ಸಚಿವ ಸಂಪುಟ ನಿನ್ನೆ ಹಲವು ಪ್ರಕರಣಗಳನ್ನು ಹಿಂದಕ್ಕೆ ಪಡೆದಿದೆ ಮತ್ತು ಅವುಗಳ ಪೈಕಿ ಒಂದೆರಡು ಪ್ರಕರಣಗಳು ನನಗೆ ಸಂಬಂಧಿಸಿದ್ದು ಆಗಿವೆ ಎಂಬುದರ ಕುರಿತು ಮಾಧ್ಯಮ ವರದಿಗಳನ್ನು ಗಮನಿಸಿದೆ. ಹಲವಾರು ವರ್ಷಗಳಿಂದ ಕನ್ನಡ ಪರ ಹೋರಾಟಗಾರರ ಮೇಲೆ ಹೂಡಲಾಗಿರುವ ಸಾವಿರಾರು ಪ್ರಕರಣಗಳನ್ನು ಹಿಂದಕ್ಕೆ ಪಡೆಯಬೇಕು ಎಂದು ಕೇಳುತ್ತಲೇ ಬಂದಿದ್ದೇವೆ. ಸ್ವತಃ ಮುಖ್ಯಮಂತ್ರಿ, ಉಪಮುಖ್ಯ ಮಂತ್ರಿಗಳು ಆಗಾಗ ಎಲ್ಲ ಪ್ರಕರಣಗಳನ್ನು ಹಿಂದಕ್ಕೆ ಪಡೆಯುವುದಾಗಿ ಹೇಳುತ್ತಾ ಬಂದಿದ್ದಾರೆ. ನಾನೇ ಖುದ್ದಾಗಿ ಮುಖ್ಯ ಮಂತ್ರಿಗಳು, ಗೃಹಸಚಿವರು, ಕಾನೂನು ಸಚಿವರನ್ನು ಭೇಟಿಯಾಗಿ ಮಾತನಾಡಿದ್ದೆ.

ಈಗ ನಾಮಕಾವಸ್ತೆ ಎರಡು ಪ್ರಕರಣಗಳನ್ನು ಹಿಂದಕ್ಕೆ ಪಡೆಯುವುದಾಗಿ ತೀರ್ಮಾನ ಮಾಡಿದ್ದಾರೆ. ಮೂಗಿಗೆ ತುಪ್ಪ ಹಚ್ಚೋದು ಅಂದ್ರೆ ಇದೇನಾ? ಇದನ್ನು ಕೇಳಿದಾಗ ನನಗೆ ಅನಿಸಿದ್ದು ಏನೆಂದರೆ ಇವರು ಆ ಎರಡು ಪ್ರಕರಣಗಳನ್ನಾದರೂ ಯಾಕೆ ಹಿಂದಕ್ಕೆ ಪಡೆದರು ಎಂದು. ನನ್ನ ಮೇಲೆ ಒಟ್ಟು 27 ಪ್ರಕರಣಗಳು ಇವೆ. ಎಲ್ಲವೂ ಚಳವಳಿಯ ಪ್ರಕರಣಗಳು. ಯಾರಿಗೋ ಹೊಡೆದ, ಬಡಿದ ಪ್ರಕರಣ ಗಳು ಅಲ್ಲ, ಸಮಾಜದಲ್ಲಿ ಸಂಘ ರ್ಷಕ್ಕೆ ಕಾರಣವಾದ ಪ್ರಕರಣಗಳಂತೂ ಅಲ್ಲವೇ ಅಲ್ಲ. ನನ್ನ ಕರವೇ ಕಾರ್ಯಕರ್ತರ ಮೇಲೆ ರಾಜ್ಯಾದ್ಯಂತ ನೂರಾರು ಪ್ರಕರಣ ಗಳನ್ನು ಹಾಕಲಾಗಿದೆ. ಅವುಗಳ ಸಂಪೂರ್ಣ ವಿವರಗಳನ್ನು ಸಹ ಸರ್ಕಾರಕ್ಕೆ ನೀಡಿದ್ದೇವೆ. ಆದರೆ ಇದ್ಯಾವುದೂ ಸರ್ಕಾರದ ಕಣ್ಣಿಗೆ ಬಿದ್ದಿಲ್ಲ. ಹಾಗೆ ನೋಡುವುದಾದರೆ ಬಿದ್ದಿಲ್ಲ ಎಂದೇನಲ್ಲ, ಜಾಣ ಕುರುಡು ಅಷ್ಟೇ ಎಂದು ಕಿಡಿಕಾರಿದ್ದಾರೆ.

ಸರ್ಕಾರ ನಮಗೆ ಯಾವ ಸಂದೇಶ ನೀಡುತ್ತಿದೆ ಎಂಬುದು ನಮಗೆ ಈಗ ಸ್ಪಷ್ಟವಾಗಿ ಅರ್ಥವಾಗುತ್ತಿದೆ. ಕನ್ನಡ, ಕನ್ನಡ ಚಳವಳಿ ಕುರಿತು ಇವರಿಗೆ ಇರುವ ಕಾಳಜಿಯೂ ಅರ್ಥವಾಗುತ್ತಿದೆ. ಕನ್ನಡ ಹೋರಾಟಗಾರರು ಬೀದಿಗೆ ಇಳಿಯಬಾರದು, ಕನ್ನಡ ಅಸ್ಮಿತೆಯನ್ನು ರಕ್ಷಿಸಲು ಈ ನಾಡಿನ ಯುವಕ ಯುವತಿಯರು ಮುಂದೆ ಬರಬಾರದು. ಕನ್ನಡ ಚಳವಳಿಯೇ ಸತ್ತು ಹೋಗಬೇಕು. ಇದು ಇವರ ಉದ್ದೇಶ.

ಕನ್ನಡ ಹೋರಾಟಗಾರರ ಮೇಲಿನ ಪ್ರಕರಣಗಳನ್ನು ಹಿಂದಕ್ಕೆ ಪಡೆಯಬಾರದು ಎಂಬ ಕುತಂತ್ರವನ್ನು ಯಾರು ಹೆಣೆಯುತ್ತಿದ್ದಾರೆ, ಇದರ ಹಿಂದೆ ಯಾರಿದ್ದಾರೆ ಅನ್ನುವುದೂ ಕೂಡ ನಮಗೆ ಗೊತ್ತಿದೆ. ಸಚಿವ ಸಂಪುಟವನ್ನು ದಾರಿ ತಪ್ಪಿಸುವ ಐಎಎಸ್, ಐಪಿಎಸ್ ಬಾಬುಗಳ ಕುರಿತೂ ನಮಗೆ ಚೆನ್ನಾಗಿ ಅರಿವಿದೆ. ಯಾರು ಯಾರಿಗೆ ಯಾವ ಸಂದರ್ಭದಲ್ಲಿ ಉತ್ತರ ಕೊಡಬೇಕೋ ಕೊಟ್ಟೆ ಕೊಡುತ್ತೇವೆ. ಯಾವುದನ್ನೂ ಬಾಕಿ ಇರಿಸಿಕೊಳ್ಳುವುದಿಲ್ಲ. ಆ ಕಾಲಕ್ಕೆ ಕಾಯುತ್ತಿದ್ದೇವೆಂದು ಹೇಳಿದ್ದಾರೆ.

ಸಿಕ್ಕಿದ್ದೆ ಅಂದುಕೊಳ್ಳುವೆ. ಅವರು ಇನ್ನು ಮುಂದಾದರೂ ತೆಪ್ಪಗೆ ಇರಲಿ. ಕರವೇ ಕನ್ನಡದ ದಾರಿಯಲ್ಲಿ ಯಾರೇ ಅಡ್ಡ ಬಂದರೂ ಅವರ ವಿರುದ್ಧ ನಿಲ್ಲುತ್ತದೆ. ಅದು ಕಾಂಗ್ರೆಸ್ ಆಗಲಿ, ಬಿಜೆಪಿಯಾಗಲಿ ಅಥವಾ ಇನ್ಯಾವುದೇ ಪಕ್ಷವಾಗಲಿ, ನಮ್ಮ ನಿಲುವು ಬದಲಾಗುವುದಿಲ್ಲ. ನಾವು ಯಾರ ಪರವಾಗಿಯೂ ಇಲ್ಲ, ಯಾರೂ ನಮ್ಮ ಪರವಾಗಿಯೂ ಇಲ್ಲ. ನಾವು ಕನ್ನಡಿಗರ, ಕರ್ನಾಟಕದ ಆಶೋತ್ತರಗಳ ಪರವಾಗಿ ಇದ್ದೇವೆ, ಅಷ್ಟೇ.

ಕರ್ನಾಟಕ ರಕ್ಷಣಾ ವೇದಿಕೆ ಕೈಗೊಂಡ ಐತಿಹಾಸಿಕ ಕನ್ನಡ ನಾಮಫಲಕ ಚಳವಳಿ ಸಂದರ್ಭದಲ್ಲಿ ಇದೇ ಕಾಂಗ್ರೆಸ್ ಸರ್ಕಾರ ನನ್ನ ಮೇಲೆ ಒಂದೇ ದಿನ ಹದಿನೇಳು ಪ್ರಕರಣಗಳನ್ನು ದಾಖಲಿಸಿತು, ಹದಿನಾರು ದಿನ ಜೈಲಿಗೆ ಕಳುಹಿಸಿತು. ಆ ಪ್ರಕರಣಗಳು ಇನ್ನೂ ನ್ಯಾಯಾಲಯಗಳಲ್ಲಿ ನಡೆಯುತ್ತಲೇ ಇವೆ. ಈ ಸರ್ಕಾರ ಈ ಪ್ರಕರಣಗಳನ್ನು ಹಿಂದಕ್ಕೆ ಪಡೆಯುವ ಯಾವ ಲಕ್ಷಣವೂ ಕಾಣುತ್ತಿಲ್ಲ. ಪರವಾಗಿಲ್ಲ, ಕೇಸಿಗೆ ಹೆದರಿ ಸುಮ್ಮನೆ ಕೂರುವವರು ನಾವಲ್ಲ. ಕನ್ನಡಕ್ಕಾಗಿ ಇಂಥ ಸಾವಿರ ಪ್ರಕರಣ ಹೂಡಿದರೂ ನಾವು ಚಳವಳಿಯ ಮಾರ್ಗದಿಂದ ವಿಮುಖರಾಗುವುದಿಲ್ಲ ಎಂದು ತಿಳಿಸಿದ್ದಾರೆ.

# ಹುಬ್ಬಳ್ಳಿಯಲ್ಲಿ ಆಟವಾಡುತ್ತಿದ್ದ ಬಾಲಕ ಗುಂಡಿಗೆ ಬಿದ್ದು ದುರ್ಮರಣ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಪಿಲ್ಲರ್ ಹಾಕಲು ತೋಡಿದ್ದ ನೀರು ತುಂಬಿದ ಗುಂಡಿಗೆ ಬಿದ್ದು 9 ವರ್ಷದ ಬಾಲಕ ಸಾವನ್ನಪ್ಪಿರುವ ಹೃದಯವಿದ್ರಾವಕ ಘಟನೆ ಹುಬ್ಬಳ್ಳಿಯ ವಿಜಯನಗರ ಪ್ರದೇಶದಲ್ಲಿ ನಡೆದಿದೆ.

ಮೃತ ಬಾಲಕನನ್ನು ಬಾಲಾಜಿ (9) ಎಂದು ಗುರುತಿಸಲಾಗಿದೆ. ಆತ ಹುಬ್ಬಳ್ಳಿಯ ಕೇಶ್ವಾಪುರದ ಆಜಾದ್ ನಗರ ನಿವಾಸಿಯಾಗಿದ್ದಾನೆ.


ಮಾಹಿತಿ ಪ್ರಕಾರ, ಬಾಲಾಜಿ ತನ್ನ ಸ್ನೇಹಿತರೊಂದಿಗೆ ಆಟವಾಡುತ್ತಾ ವಿಜಯನಗರ ಭಾಗಕ್ಕೆ ಬಂದಿದ್ದ. ಇದೇ ವೇಳೆ ಕಾಂಪೌಂಡ್ ಒಳಗೆ ಬಿದ್ದಿದ್ದ ತೆಂಗಿನಕಾಯಿಯನ್ನು ತೆಗೆದುಕೊಳ್ಳಲು ಹೋಗಿದ್ದಾನೆ. ಈ ಸಂದರ್ಭ ಅಲ್ಲೇ ಪಿಲ್ಲರ್ ಹಾಕಲು ತೋಡಿದ್ದ ಆಳವಾದ ಗುಂಡಿಗೆ ಆಕಸ್ಮಿಕವಾಗಿ ಬಿದ್ದಿದ್ದಾನೆ.

ಗುಂಡಿಯಲ್ಲಿ ನೀರು ತುಂಬಿಕೊಂಡಿದ್ದರಿಂದ ಬಾಲಕ ಹೊರಬರಲಾಗದೇ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾನೆ ಎಂದು ತಿಳಿದುಬಂದಿದೆ. ಬಾಲಕ ಗುಂಡಿಗೆ ಬೀಳುತ್ತಿದ್ದಂತೆಯೇ ಜೊತೆಗಿದ್ದ ಇಬ್ಬರು ಬಾಲಕರು ಹೆದರಿ ಸ್ಥಳದಿಂದ ಪರಾರಿಯಾಗಿದ್ದು, ನಡೆದ ವಿಷಯವನ್ನು ಯಾರಿಗೂ ತಿಳಿಸದೇ ಮೌನವಾಗಿದ್ದಾರೆ ಎನ್ನಲಾಗಿದೆ.

ಇದರಿಂದ ಬಾಲಾಜಿ ಮನೆಗೆ ವಾಪಸ್ ಬರದ ಹಿನ್ನೆಲೆಯಲ್ಲಿ ಆತಂಕಗೊಂಡ ಪೋಷಕರು ಮಗ ನಾಪತ್ತೆಯಾಗಿದ್ದಾನೆ ಎಂದು ಪೊಲೀಸರಿಗೆ ದೂರು ನೀಡಿದ್ದಾರೆ. ಬಳಿಕ ತನಿಖೆ ಆರಂಭಿಸಿದ ಪೊಲೀಸರು ಸುತ್ತಮುತ್ತಲಿನ ಸಿಸಿಟಿವಿ ಕ್ಯಾಮೆರಾ ದೃಶ್ಯಗಳನ್ನು ಪರಿಶೀಲಿಸಿದ್ದಾರೆ. ಅಲ್ಲಿನ ದೃಶ್ಯಗಳ ಆಧಾರದ ಮೇಲೆ ಬಾಲಕ ವಿಜಯನಗರ ಭಾಗಕ್ಕೆ ಹೋಗಿರುವುದು ಪತ್ತೆಯಾಗಿದ್ದು, ಬಳಿಕ ಶೋಧ ಕಾರ್ಯಾಚರಣೆ ನಡೆಸಿದ ವೇಳೆ ಗುಂಡಿಯೊಳಗೆ ಬಾಲಕನ ಶವ ಪತ್ತೆಯಾಗಿದೆ.

ಘಟನೆ ತಿಳಿಯುತ್ತಿದ್ದಂತೆ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದ್ದು, ಸ್ಥಳೀಯರಲ್ಲಿ ದುಃಖದ ವಾತಾವರಣ ನಿರ್ಮಾಣವಾಗಿದೆ. ನಿರ್ಮಾಣ ಕಾಮಗಾರಿಗಳ ಸ್ಥಳಗಳಲ್ಲಿ ಸೂಕ್ತ ಸುರಕ್ಷತಾ ಕ್ರಮ ಕೈಗೊಳ್ಳದಿರುವುದೇ ಈ ದುರಂತಕ್ಕೆ ಕಾರಣ ಎಂಬ ಆರೋಪವೂ ಕೇಳಿಬಂದಿದೆ. ಈ ಸಂಬಂಧ ಅಶೋಕ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ತನಿಖೆ ನಡೆಸುತ್ತಿದ್ದಾರೆ.

# 466 ಗ್ರಾಂ ಅಪರೂಪದ ಹಳೆಯ ಚಿನ್ನಕ್ಕೆ 8 ಕೋಟಿ ರೂ ಮೌಲ್ಯ ಅಂದಾಜು!



**ಬೆಳಗಾವಿ ವಾರ್ತೆ ಗದಗ:** ಜಿಲ್ಲೆಯ ಐತಿಹಾಸಿಕ ಪ್ರಸಿದ್ಧ ಲಕ್ಕುಂಡಿ ಗ್ರಾಮದಲ್ಲಿ ಇತ್ತೀಚೆಗೆ ಪತ್ತೆ ಯಾಗಿದ್ದ ನಿಧಿ ಪ್ರಕರಣಕ್ಕೆ ಸಂಬಂಧಿಸಿ ದಂತೆ ಮಹತ್ವದ ಮಾಹಿತಿ ಹೊರಬಿದ್ದಿದೆ.

ಇಲ್ಲಿ ಸಿಕ್ಕಿರುವ ಸುಮಾರು 466 ಗ್ರಾಂ ತೂಕದ ಅಪರೂಪದ ಪ್ರಾಚೀನ ಚಿನ್ನಾಭರಣಗಳ ಅಂದಾಜು ಮೌಲ್ಯ ಬರೋಬ್ಬರಿ 8 ಕೋಟಿ ರೂ ಆಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ.ಪಾಟೀಲ್ ಅವರು ತಿಳಿಸಿದ್ದಾರೆ.

ಬುಧವಾರ ಮಾತನಾಡಿದ ಅವರು, ಲಕ್ಕುಂಡಿಯಲ್ಲಿ ಪತ್ತೆಯಾದ ಈ ಖಜಾನೆಯಲ್ಲಿ ಸುಮಾರು 466 ಗ್ರಾಂ ತೂಕದ ಅಪರೂಪದ ಪುರಾತನ ಚಿನ್ನದ ಆಭರಣಗಳಿದ್ದು, ಅವು ಸುಮಾರು 600 ವರ್ಷಗಳ ಹಳೆಯದಾಗಿದೆ.

ಈ ಖಜಾನೆಯ ಮೌಲ್ಯ ನಿರ್ಧಾರಕ್ಕಾಗಿ ಪುರಾತತ್ವ ಇಲಾಖೆಯ ಆಯುಕ್ತರು ಗದಗ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಏಳು ಸದಸ್ಯರ ಸಮಿತಿಯನ್ನು ರಚಿಸಿದ್ದರು.

ಸಮಿತಿ ತನ್ನ ವರದಿ ಸಲ್ಲಿಸಿದ್ದು, ಅಂತರರಾಷ್ಟ್ರೀಯ ಪುರಾತತ್ವ ಮೌಲ್ಯದ ಆಧಾರದ ಮೇಲೆ ಖಜಾನೆಯ ಬೆಲೆ ಸುಮಾರು ರೂ.8 ಕೋಟಿ ಎಂದು ಅಂದಾಜಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಈ ವರ್ಷದ ಜನವರಿಯಲ್ಲಿ ಲಕ್ಕುಂಡಿಯಲ್ಲಿ ಮನೆ ನಿರ್ಮಾಣಕ್ಕಾಗಿ ಅಡಿಪಾಯ ತೋಡುವ ವೇಳೆ ಈ ಖಜಾನೆ ಪತ್ತೆಯಾಗಿತ್ತು. 15 ವರ್ಷದ ಪ್ರಜ್ವಲ್ ಎಂಬ ಬಾಲಕ ಪ್ರಾಮಾಣಿಕತೆಯಿಂದ ಆಭರಣಗಳನ್ನು ಸರ್ಕಾರಕ್ಕೆ ಒಪ್ಪಿಸಿದ್ದನು. ಈ ಹಿನ್ನೆಲೆಯಲ್ಲಿ ಪ್ರಜ್ವಲ್ ಕುಟುಂಬವನ್ನು ಬುಧವಾರ ಸನ್ಮಾನಿಸಲಾಯಿತು. ಲಕ್ಕುಂಡಿ ಹೆರಿಟೇಜ್ ಏರಿಯಾ ಡೆವಲಪ್‌ಮೆಂಟ್ ಅಥಾರಿಟಿಯ ರಾಜ್ಯ ಸಮಿತಿ ಸದಸ್ಯ ಸಿದ್ದು ಪಾಟೀಲ್ ಮಾತನಾಡಿ, ಲಕ್ಕುಂಡಿಯಲ್ಲಿ ಪುರಾತತ್ವ ಅನ್ವೇಷಣೆ ಕಾರ್ಯ ಮುಂದುವರಿದಿದ್ದು, ಈಗಾಗಲೇ ಅನೇಕ ಪುರಾತನ ವಸ್ತುಗಳನ್ನು ಸಂಗ್ರಹಿಸಲಾಗಿದೆ ಎಂದು ಹೇಳಿದ್ದಾರೆ.

# ನಿಲಯ ಪ್ರವೇಶಾತಿಗೆ ಆನ್‌ಲೈನ್ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಗೋಕಾಕ:** ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಾತಿ ಕಲ್ಪಿಸಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಪ್ರಮೀಳಾ ಬೇವಿನಗಿಡದ ತಿಳಿಸಿದರು.

ಪತ್ರಿಕಾ ಪ್ರಕಟನೆಯಲ್ಲಿ ತಿಳಿಸಿರುವ ಅವರು, ಪ್ರವೇಶ ಬಯಸುವವರು ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರು 5ನೇ ತರಗತಿಯಿಂದ 10ನೇ ತರಗತಿವರೆಗೆ ವ್ಯಾಸಾಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 2026–27ನೇ ಸಾಲಿಗೆ ಕೊನೆಯ ದಿನಾಂಕ ಜೂನ್ 8ರ ಒಳಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕಚೇರಿಗೆ ಸಂಪರ್ಕಿಸಲು ಕೋರಲಾಗಿದೆ.

## ಅನ್ನದಾತರಿಗೆ ಪರಿಹಾರ ಕೊಡಿ ಕೊಪ್ಪಳದಲ್ಲಿ ಬಿಜೆಪಿಯಿಂದ ವಿಭಿನ್ನ ರೀತಿಯಲ್ಲಿ ಪ್ರತಿಭಟನೆ

# ಸೈಕಲ್, ಎಲೆಕ್ಟ್ರಿಕಲ್ ಬೈಕ್ ನಲ್ಲಿ ತೆರಳಿ ಮನವಿ ಸಲ್ಲಿಕೆ



**ಬೆಳಗಾವಿ ವಾರ್ತೆ ಕೊಪ್ಪಳ :** ತಾಲೂಕಿನ ವಿವಿಧ ಗ್ರಾಮಗಳಲ್ಲಿ ಬಾಳೆ, ಎಲೆ ಸೇರಿ ವಿವಿಧ ತೋಟಗಾರಿಕೆ ಬೆಳೆ ಬೆಳೆದು ಮಳೆ ಹಾಗೂ ಗಾಳಿಯಿಂದ ನಷ್ಟ ಹೊಂದಿದ ರೈತರಿಗೆ ಕೂಡಲೇ ಪರಿಹಾರ ವಿತರಿಸುವಂತೆ ಒತ್ತಾಯಿಸಿ, ಕೊಪ್ಪಳ ಬಿಜೆಪಿ ಗ್ರಾಮೀಣ ಮಂಡಲ ವತಿಯಿಂದ ಗುರುವಾರ ನಗರದಲ್ಲಿ ವಿನೂತನ ರೀತಿಯಲ್ಲಿ ಪ್ರತಿಭಟನೆ ನಡೆಸಿ, ಗಮನ ಸೆಳೆಯಿತು.

ಪ್ರಧಾನಿ ನರೇಂದ್ರ ಮೋದಿ ಅವರ ಮನವಿಯಂತೆ ದೇಶದಲ್ಲಿ ಹೆಚ್ಚುತ್ತಿರುವ ಇಂಧನ ಬಳಕೆ, ಪೆಟ್ರೋಲ್–ಡೀಸೆಲ್ ಮೇಲಿನ ಅವಲಂಬನೆ ಕಡಿಮೆ ಮಾಡುವ ಅಗತ್ಯತೆ ಹಾಗೂ ಪರಿಸರ ಸಂರಕ್ಷಣೆ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಬಿಜೆಪಿ ನಾಯಕರು ಸೈಕಲ್ ಹಾಗೂ ಎಲೆಕ್ಟ್ರಿಕಲ್ ಬೈಕ್‌ಗಳಲ್ಲಿ ತೆರಳಿ ವಿಭಿನ್ನ ರೀತಿಯಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಅಶೋಕ ವೃತ್ತದಲ್ಲಿ ಜಮಾಯಿಸಿದ ಬಿಜೆಪಿ ಮುಖಂಡರು, ಅಲ್ಲಿಂದ ಡಿಸಿ ಕಚೇರಿಯವರೆಗೆ ಸೈಕಲ್ ಹಾಗೂ ಎಲೆಕ್ಟ್ರೀಕ್ ಬೈಕ್ ಮುಖಾಂತರ ಡಿಸಿ ಕಚೇರಿಯವರೆಗೆ ತೆರಳಿ ನಾಗರಿಕರಲ್ಲಿ ಪರಿಸರ ಜಾಗೃತಿ ಮೂಡಿಸಿದರು.

ನಂತರ ರೈತರೊಂದಿಗೆ ಬಿಜೆಪಿ ನಾಯಕರು, ಜಿಲ್ಲಾಡಳಿತ ಭವನಕ್ಕೆ ಮುತ್ತಿಗೆ ಹಾಕಲು ಪ್ರಯತ್ನಿಸಿದರು. ಈ ವೇಳೆ ವಿಪ ಸದಸ್ಯೆ ಹೇಮಲತಾ ನಾಯಕ್, ಕೊಪ್ಪಳ ಲೋಕಸಭಾ ಕ್ಷೇತ್ರದ ನಿಕಟಪೂರ್ವ ಅಭ್ಯರ್ಥಿ ಬಸವರಾಜ ಕ್ಯಾವಟರ್ ಸೇರಿ ಇನ್ನಿತರ ನಾಯಕರನ್ನು ಪೊಲೀಸರು ತಡೆದರು.

ಬಳಿಕ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ಧರಣಿ ಕುಳಿತ ಬಿಜೆಪಿ ನಾಯಕರು, ಸರಕಾರದ ವಿಳಂಭ ದೋರಣೆ ನೀತಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಅಲ್ಲದೆ, ಬೇಜವಾಬ್ದಾರಿ ಮೆರೆಯುತ್ತಿರುವ ಸ್ಥಳೀಯ ಶಾಸಕ ರಾಘವೇಂದ್ರ ಹಿಟ್ನಾಳ್ ಎಂದು ಘೋಷಣೆ ಕೂಗಿ ಆಡಳಿತ ವ್ಯವಸ್ಥೆಯ ಕಾರ್ಯ ವೈಖರಿ ಖಂಡಿಸಿದರು.

ಕೊನೆಗೆ ಸ್ಥಳಕ್ಕಾಗಮಿಸಿದ ಅಪರ ಜಿಲ್ಲಾಧಿಕಾರಿ ಸಿದ್ದರಾಮೇಶ್ವರ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್ ಮಾತನಾಡಿ, ಒಂದು ಎಕರೆ ಬಾಳೆ ಬೆಳೆ ಬೆಳೆಯಲು ರೈತರು ಲಕ್ಷಾಂತರ ರೂಪಾಯಿ ಸಾಲ ಮಾಡಿ ಹೂಡಿಕೆ ಮಾಡಿದ್ದರೂ, ಅಕಾಲಿಕ ಮಳೆ ಮತ್ತು ಗಾಳಿಯಿಂದ ಕೈಗೆ ಬಂದ ಬೆಳೆ ಸಂಪೂರ್ಣ ಹಾನಿಗೊಳಗಾಗಿದೆ. ಇದರಿಂದ ರೈತರ ಕುಟುಂಬಗಳು ಆರ್ಥಿಕ ಸಂಕಷ್ಟಕ್ಕೆ ತುತ್ತಾಗಿ ಬದುಕಿನ ಮೇಲೆಯೇ ಆತಂಕ ಎದುರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ.

ಹೀಗಾಗಿ ತಕ್ಷಣವೇ ಸಮಗ್ರ ಬೆಳೆ ಹಾನಿ ಸಮೀಕ್ಷೆ ನಡೆಸಿ ನ್ಯಾಯಯುತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು. ಮುಖಂಡ ಬಸವರಾಜ ಕ್ಯಾವಟರ್ ಮಾತನಾಡಿ,

ರಾಜ್ಯದಲ್ಲಿ ರೈತರ ಪರಿಸ್ಥಿತಿ ಚಿಂತಾಜನಕವಾಗಿದೆ. ಅದರಲ್ಲಿಯೂ ಕೊಪ್ಪಳ ತಾಲೂಕಿನಲ್ಲಿ ಮುಂಗಾರು ಪೂರ್ವ ಮಳೆಗೆ ತೋಟಗಾರಿಕೆ ಬೆಳೆಗಳು ನೆಲಕಚ್ಚಿವೆ.

ಸಾಲ ಸೂಲ ಮಾಡಿ, ಬಾಳೆ, ಎಲೆ ಸೇರಿ ವಿವಿಧ ಬೆಳೆ ಬೆಳೆದಿದ್ದ ರೈತರ ಪರಿಸ್ಥಿತಿ ಕಷ್ಟ ನೋಡಲಾಗುತ್ತಿಲ್ಲ.

ಈ ವಿಚಾರದಲ್ಲಿ ಮುತುವರ್ಜಿ ವಹಿಸಿ, ಸರಕಾರದ ಗಮನಕ್ಕೆ ತಂದು ರೈತರಿಗೆ ಪರಿಹಾರ ಕೊಡಿಸಬೇಕಾದ ಶಾಸಕ ಹಿಟ್ನಾಳ್ ತಮ್ಮ ಜವಾಬ್ದಾರಿ ಮೆರೆಯುತ್ತಿಲ್ಲ.

ರೈತರು ದೇಶದ ಅನ್ನದಾತರು. ರೈತ ಉಳಿದರೆ ದೇಶ ಉಳಿಯುತ್ತದೆ ಎಂಬ ನಿಟ್ಟಿನಲ್ಲಿ ಸರಕಾರ ರೈತರ ಸಂಕಷ್ಟಕ್ಕೆ ತಕ್ಷಣ ಸ್ಪಂದಿಸಬೇಕು.

ಕೇವಲ ಭರವಸೆಗಳಲ್ಲ, ನೇರವಾಗಿ ರೈತರ ಬ್ಯಾಂಕ್ ಖಾತೆಗಳಿಗೆ ಪರಿಹಾರದ ಹಣ ಜಮಾ ಮಾಡುವ ಕೆಲಸವಾಗಬೇಕು ಎಂದು ಆಗ್ರಹಿಸಿದರು.

ಅಲ್ಲದೆ, ಇನ್ನೇನು ಮುಂಗಾರು ಆರಂಭವಾಗಲಿದ್ದು, ರಸಗೊಬ್ಬರ ವಿತರಣೆ ಸಮರ್ಪಕವಾಗಿ ನಡೆಯಬೇಕು. ರೈತ ಸಂಪರ್ಕ ಕೇಂದ್ರಗಳಲ್ಲಿ ಲಭ್ಯವಿರುವ ರೀ ಜಗಳ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಜಿಲ್ಲಾಡಳಿತವನ್ನು ಇದೇ ವೇಳೆ ಒತ್ತಾಯಿಸಿದರು.

ಈ ವೇಳೆ ಗ್ರಾಮೀಣ ಮಂಡಲ ಅಧ್ಯಕ್ಷ ವೀರೇಶ ಸಜ್ಜನ್, ಚಂದ್ರಶೇಖರ ಪಾಟೀಲ್ ಹಲಗೇರಿ, ಮಹಾಂತೇಶ್ ಪಾಟೀಲ್ ಮೈ ನಲ್ಲಿ, ಪಕೀರಪ್ಪ ಆರೇರ್, ಗಣೇಶ್ ಹೋರಟತ್ನಾಳ, ಪ್ರದೀಪ್ ಹಿಟ್ನಾಳ್, ರೈತ ಮೋರ್ಚಾ ಜಿಲ್ಲಾ ಅಧ್ಯಕ್ಷ ಅಶೋಕ್ ಗುಳದಳ್ಳಿ, ತಾಲೂಕು ಅಧ್ಯಕ್ಷ ವೀರೇಶ್ ಕಸನಖಂಡಿ, ಜಿಲ್ಲಾ ಕಾರ್ಯದರ್ಶಿ ಸುನಿಲ್ ಹೆಸರೂರ್, ಪ್ರಭುಗೌಡ ಪಾಟೀಲ್, ಮಹೇಶ್ ಅಂಗಡಿ, ಅಂದಪ್ಪ ಯಲ್ಲಮ್ಮನವರ, ಗುರಪ್ಪ ಗೋಡೆಕಾರ್, ಮಹಿಳಾ ನಗರ್ ಘಟಕದ ಅಧ್ಯಕ್ಷರು ಜಯಶ್ರೀ ಆರೇರ್, ಗ್ರಾಮೀಣ ಮಂಡಲ ಮಹಿಳಾ ಅಧ್ಯಕ್ಷರಾದ ಅನುರಾಧ ಬಿಸನಳ್ಳಿ, ಬಸವರೆಡ್ಡಿ ಬೈರಾಪುರ್, ರಾಜು ಬಾಕ್ಳೆ, ಗವಿರಾಜ್ ಗೊರವರ , ರಮೇಶ್ ಕವಲೂರು, ದೇವಪ್ಪ ಹ್ಯಾಟಿ, ಚನ್ನಬಸವ ಗಾಳಿ, ದೇವರಾಜ್ ಹಲಸಮುದ್ರ, ಮಹಾಲಕ್ಷ್ಮಿ ಕಂದಾರಿ, ಉಮೇಶ್ ಕುದ್ರೇಕರ್, ರಾಜ್ಯ ಕಾರ್ಯಕಾರಣಿ ಸದಸ್ಯರಾದ ಶೋಭಾ ನಗರಿ, ಮಾರುತಿ ಹಡಪದ, ನೀಲಕಂಠಯ್ಯ ಹಿರೇಮಠ, ದೀಪಕ್ ಹಿರೇಮಠ, ನಾಗರಾಜ್ ದೊಡ್ಡಮನಿ, ವಿಜಯಪಾಟೀಲ್ ಹಲಗೇರಿ, ಶರಣಯ್ಯ ಮುಂದರಗಿಮಠ, ಶರಣಪ್ಪ ಮಡಿವಾಳರ, ಚಂದ್ರು ಗೋಸಿ, ರಮೇಶ್ ಕರಡಿ, ಖಾಜಾ ಹುಸೇನ್, ಬಿಜೆಪಿಯ ಮುಖಂಡರು, ವಿವಿಧ ಮೋರ್ಚಾಗಳ ಪದಾಧಿಕಾರಿಗಳು, ಮಹಿಳಾ ಮುಖಂಡರು ಹಾಗೂ ಕಾರ್ಯಕರ್ತ ಮಿತ್ರರು ಉಪಸ್ಥಿತರಿದ್ದರು.



# ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪದಾಧಿಕಾರಿಗಳ ಆಯ್ಕೆ

## ಜಿಲ್ಲಾಧ್ಯಕ್ಷರಾಗಿ ಶರಣಬಸನಗೌಡ, ಪ್ರಧಾನ ಕಾರ್ಯದರ್ಶಿ ಹನುಮಂತಪ್ಪ ಆಯ್ಕೆ



**ಬೆಳಗಾವಿ ವಾರ್ತೆ ಕೊಪ್ಪಳ :** ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಜಿಲ್ಲಾ ಘಟಕ ಕೊಪ್ಪಳ 2026–2031 ರ ಅವಧಿಗೆ ನೂತನ ಪದಾಧಿಕಾರಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಜಿಲ್ಲಾಧ್ಯಕ್ಷರಾಗಿ ಶರಣಬಸನಗೌಡ ಪಾಟೀಲ, ಉಪಾಧ್ಯಕ್ಷರಾಗಿ ಹೊಳಿಬಸಯ್ಯ. ಕೆ.ಎಮ್, ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಹನುಮಂತಪ್ಪ ಕುರಿ, ಮಹಿಳಾ ಉಪಾಧ್ಯಕ್ಷರಾಗಿ ಮಾಲಾ ಹುನಗುಂದ, ಕೋಶ್ಯಾಧ್ಯಕ್ಷರಾಗಿ ಪಾಂಡುರಂಗ ಅಲ್ಲೂರ ಜಿಲ್ಲಾ ಸಹ ಕಾಯದರ್ಶಿಯಾಗಿ ಬಸವರಾಜ ಕಮಲಾಪೂರ, ಮಹಿಳಾ ಸಹ ಕಾರ್ಯದರ್ಶಿಯಾಗಿ ವಹೀದಾತಾಜ್, ಸಂಘಟನಾ ಕಾರ್ಯದರ್ಶಿಯಾಗಿ ಮುರ್ತುಜಾಸಾಬ ಮುಜಾವರ ಆಯ್ಕೆಯಾಗಿದ್ದಾರೆ.

ಕೊಪ್ಪಳ ಜಿಲ್ಲಾ ನೂತನ ಪದಾಧಿಕಾರಿಗಳಾಗಿ ಅವಿರೋಧವಾಗಿ ಆಯ್ಕೆಯಾಗಲು ಸಹಕರಿಸಿದ ರಾಜ್ಯ ಘಟಕದ ಅಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿಗಳು, ಕೊಪ್ಪಳ ಜಿಲ್ಲಾ ಎಲ್ಲಾ ತಾಲೂಕಿನ ಕಾರ್ಯಕಾರಿ ಸಮಿತಿ ಸದಸ್ಯರಿಗೆ ಮತ್ತು ಕೊಪ್ಪಳ ಜಿಲ್ಲೆಯ ಸರ್ವ ಮುಖ್ಯೋಪಾಧ್ಯಾಯರು ಮತ್ತು ಗುರುಗಳು–ಗುರುಮಾತೆಯರಿಗೆ ನೂತನ ಪದಾಧಿಕಾರಿಗಳು ಅಭಿನಂದಿಸಿದ್ದಾರೆ.

**ಹರ್ಷ :** ಕೊಪ್ಪಳ ಜಿಲ್ಲಾ ಸರಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾಗಿ ಶರಣಬಸವನಗೌಡ ಪಾಟೀಲ್, ಜಿಲ್ಲಾ ಉಪಾಧ್ಯಕ್ಷರಾಗಿ ಹೊಳಿಬಸಯ್ಯ, ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಹನುಮಂತಪ್ಪ ಕುರಿ ಸೇರಿದಂತೆ ಉಳಿದ ನೂತನ ಪದಾಧಿಕಾರಿಗಳು ಆಯ್ಕೆಯಾಗಿದ್ದು ಶಿಕ್ಷಕ ವೃಂದ ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದೆ.

# ತಜ್ಞವೈದ್ಯ, ವೈದ್ಯಾಧಿಕಾರಿಗಳ ನೇಮಕಕ್ಕೆ ಅರ್ಜಿ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಬಾಗಲಕೋಟೆ ಜಿಲ್ಲೆಯ ತಾಲೂಕಾ ಆಸ್ಪತ್ರೆಗಳು, ತಜ್ಞ ವೈದ್ಯಕರು ಮತ್ತು ತುರ್ತು ಚಿಕಿತ್ಸಾ ವೈದ್ಯಾಧಿಕಾರಿಗಳ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ತಜ್ಞ ವೈದ್ಯರು & ಹಿರಿಯ ವೈದ್ಯಾಧಿಕಾರಿಗಳ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇರುವ ಹುದ್ದೆಗೆ ಗುತ್ತಿದೆ ಆಧಾರದ ಮೇಲೆ ನೇಮಕಾತಿಗಾಗಿ ಪ್ರತಿ ದಿನ ನೇರ ಸಂದರ್ಶನಕ್ಕೆ ಹಾಜರಾಗಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಕ್ಷಣ ದಾಸೋಹಿ ಶ್ರೀ ಬಸಪ್ಪ ವಿ. ಭೂಮರಡ್ಡಿ ಅವರ 141 ನೇ ಜಯಂತಿ ಆಚರಣೆ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಉತ್ತರ ಕರ್ನಾಟಕ ಭಾಗದಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಉದಾರ ದೇಣಿಗೆ ನೀಡಿದ ಬಸವಾದಿ ಶರಣರ ದಾಸೋಹ ಪರಂಪರೆಯನ್ನು ಅಳವಡಿಸಿಕೊಂಡಿದ್ದ ಶಿಕ್ಷಣ ದಾಸೋಹಿ ಶ್ರೀ ಬಸಪ್ಪ ವಿ. ಭೂಮರಡ್ಡಿ ಅವರ 141 ನೇ ಜಯಂತಿ ನಿಮಿತ್ತ ಕೆ.ಎಲ್.ಇ ಸಂಸ್ಥೆಯ ಬಿ.ವಿ.ಭೂಮರಡ್ಡಿ ಮಹಾವಿದ್ಯಾಲಯದ ಆವರಣದಲ್ಲಿರುವ, ಶಿಕ್ಷಣ ಪ್ರೇಮಿಗಳು, ಶ್ರೇಷ್ಠ ದಾನಿಗಳು, ಖ್ಯಾತ ಆಯಿಲ್ ಕಿಂಗ್ ಎಂದೆ ಹೆಸರಾಗಿದ್ದ, ಉದ್ದಿಮೆಗಳು, ಪರಮಪೂಜ್ಯರಾದ ಶ್ರೀ ಬಸಪ್ಪ ವಿ. ಭೂಮರಡ್ಡಿ ಅವರ ಆತ್ಯಾಕರ್ಷಕವಾದ ಕಂಚಿನ ಪುತ್ಥಳಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಪುಷ್ಪಾರ್ಪಣೆ ಮಾಡುವ ಮೂಲಕ ಗೌರವ ಅರ್ಪಣೆ ಮಾಡಿ, ನಮನಗಳನ್ನು ಸಲ್ಲಿಸಲಾಯಿತು. ಬಸಪ್ಪ ವಿ. ಭೂಮರಡ್ಡಿ ಅವರು ಮಾಡಿದ ಸೇವಾ ಕಾರ್ಯಗಳನ್ನು ಸ್ಮರಿಸಲಾಯಿತು.

ಸುಜಯ್ ಸುರೇಶ್ ಹೊರಕೇರಿ, ಸೋಹನ್ ಸುರೇಶ್ ಹೊರಕೇರಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಗಣ್ಯರು, ಮುಂತಾದವರು ಉಪಸ್ಥಿತರಿದ್ದರು.

# ಜಿಲ್ಲೆಯ ಶಾಲೆಗಳಿಗೆ ಅಗತ್ಯಕ್ಕೆ ಅನುಗುಣವಾಗಿ ಗ್ಯಾಸ್ ಸಂಪರ್ಕ ಕಲ್ಪಿಸಲು ಕಂಪನಿಗಳಿಗೆ ಜಿಲ್ಲಾಧಿಕಾರಿಗಳ ನಿರ್ದೇಶನ

**ಬೆಳಗಾವಿ ವಾರ್ತೆ ಧಾರವಾಡ:** ಶಾಲಾ ಮಕ್ಕಳಿಗೆ ಮಧ್ಯಾಹ್ನದ ಊಟ ಹಾಗೂ ಮೊಟ್ಟೆ ವಿತರಣೆಯಲ್ಲಿ ಯಾವುದೇ ವ್ಯತ್ಯಯವಾ ಗಬಾರದು. ಶಾಲೆಗಳು ಹಾಗೂ ವಸತಿ ನಿಲಯಗಳಿಗೆ ಅಗತ್ಯವಾದ ಗ್ಯಾಸ್ ಸಂಪರ್ಕಗಳನ್ನು ತಕ್ಷಣವೇ ಒದಗಿಸಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಹೇಳಿದರು.

ಅವರು ಮೇ.21 ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೆಟ್ರೋಲ್ ಬಂಕ್ ಕಂಪನಿಗಳ ಪ್ರತಿನಿಧಿಗಳ ಮತ್ತು ಗ್ಯಾಸ್ ವಿತರಕರ ಕಂಪನಿಗಳ ಪ್ರತಿನಿದಿಗಳೊಂದಿಗೆ ಸಭೆ ಜರುಗಿಸಿ, ಮಾತನಾಡಿದರು.

ಶಾಲೆಯಲ್ಲಿ ಮಕ್ಕಳಿಗೆ ಬೇಯಿಸಿದ ಮೊಟ್ಟೆ ನೀಡುವ ಯೋಜನೆ ಸಮರ್ಪಕವಾಗಿ ಜಾರಿಯಾಗಲು ಮೊಟ್ಟೆ ಕುದಿಸಲು ಗ್ಯಾಸ್ ಸಂಪರ್ಕ ಅತ್ಯಗತ್ಯವಾಗಿದ್ದು, ಸೋಮವಾರದೊಳಗೆ ಎಲ್ಲ ಶಾಲೆಗಳು ಮತ್ತು ಹಾಸ್ಟೆಲ್‌ಗಳಿಗೆ ಗ್ಯಾಸ್ ಸಂಪರ್ಕ ಕಲ್ಪಿಸಲು ಅವರು ಸೂಚಿಸಿದರು.

ಇಂಡಿಯನ್ ಆಯಿಲ್ ಕಾರ್ಪೋರೇಷನ್ (IOCL), ಭಾರತ ಪೆಟ್ರೋಲಿಯಂ (BPCL) ಹಾಗೂ ಹಿಂದೂಸ್ತಾನ್ ಪೆಟ್ರೋಲಿಯಂ (HPCL) ಸಂಸ್ಥೆಗಳು ಈಗಾಗಲೇ ಎಷ್ಟು ಸಂಪರ್ಕಗಳನ್ನು ನೀಡಿವೆ ಎಂಬ ಕುರಿತು ಸೋಮವಾರದೊಳಗೆ ವರದಿ ಸಲ್ಲಿಸುವಂತೆ ಸೂಚನೆ ನೀಡಿದರು.

ಜಿಲ್ಲೆಯ ಎಲ್ಲಾ ಪೆಟ್ರೋಲ್ ಬಂಕ್‌ಗಳಲ್ಲಿ ಪ್ರತಿದಿನ ಲಭ್ಯವಿರುವ ಇಂಧನದ ಲಭ್ಯತೆ ಹಾಗೂ ಪ್ರಸ್ತುತ ದರದ ವಿವರವನ್ನು ಸಾರ್ವಜನಿಕರಿಗೆ ಎದ್ದು ಕಾಣಿಸುವಂತೆ ಸೂಚನಾ ಫಲಕದಲ್ಲಿ ಕಡ್ಡಾಯವಾಗಿ ಪ್ರದರ್ಶಿಸಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಹೇಳಿದರು.



ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಮಲ್ಲಿಕಾರ್ಜನ ತೊದಲಬಾಗಿ, ಶಾಲಾ ಶಿಕ್ಷಣ ಇಲಾಖೆಯ ಅಕ್ಷರ ದಾಸೋಹ ಯೋಜನೆ ಶಿಕ್ಷಣಾಧಿಕಾರಿ ರೂಪಾ ಬಿ. ಪೂರಮಕರ ಹಾಗೂ ಪೆಟ್ರೋಲ್ ಬಂಕ್ ಮತ್ತು ಗ್ಯಾಸ್ ಮಾಲೀಕರು ಉಪಸ್ಥಿತರಿದ್ದರು.

# ಮನೆ ಮೇಲ್ಛಾವಣೆ ಕುಸಿದು ವೃದ್ಧೆ ಸಾವು

**ಬೆಳಗಾವಿ ವಾರ್ತೆ ವಿಜಯಪುರ:** ಮನೆಯ ಮೇಲ್ಛಾವಣಿ ಕುಸಿದು ಮಹಿಳೆ ಜೀವಂತ ಸಮಾಧಿ ಯಾಗಿರುವ ದುರಂತ ಜಿಲ್ಲೆಯ ನಿಡಗುಂದಿ ಪಟ್ಟಣದ ಗೌರೀಶ್ವರ ದೇವಸ್ಥಾನ ಬಳಿ ಗುರುವಾರ ನಸುಕಿನಲ್ಲಿ ನಡೆದಿದೆ.

ನಿಡಗುಂದಿ ನಿವಾಸಿ ಮಹಾದೇವಿ ವಾರದ (55) ಮೃತಪಟ್ಟ ಮಹಿಳೆ. ಮೊನ್ನೆ ಸುರಿದ ಮಳೆಗೆ ನೆನೆದಿದ್ದ ಹಳೆಯ ಮನೆ ಮೇಲ್ಛಾವಣಿ ಕುಸಿದು ಈ ಅವಘಡ ಸಂಭವಿಸಿದೆ. ನಸುಕಿನ ಜಾವ ಮನೆಯ ಮೇಲ್ಛಾವಣಿ ಕುಸಿದು ಮಹಾದೇವಿ ಜೀವಂತ ಸಮಾಧಿಯಾಗಿದ್ದಾರೆ.

ಮನೆಯ ಹೊರಗೆ ಮಲಗಿದ್ದ ಪತಿ ಶಿವಾನಂದ ಅಪಾಯದಿಂದ ಪಾರಾಗಿದ್ದಾರೆ. ಸ್ಥಳಕ್ಕೆ ನಿಡಗುಂದಿ ಪೊಲೀಸರು



ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮಹಾದೇವಿ ಶವ ಮರಣೋತ್ತರ ಪರೀಕ್ಷೆಗೆ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಸ್ಥಳದಲ್ಲಿ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ. ನಿಡಗುಂದಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಕಾಳಗಿ ಆಸ್ಪತ್ರೆ ಆರೋಗ್ಯ ರಕ್ಷಾ ಸಮಿತಿಗೆ ಸದಸ್ಯರ ಆಯ್ಕೆ: ಸನ್ಮಾನ

## ಕಾಳಗಿ ಸರ್ಕಾರಿ ಆಸ್ಪತ್ರೆ ಆರೋಗ್ಯ ರಕ್ಷಾ ಸಮಿತಿ ನೂತನ ಸದಸ್ಯರ ಪದಗ್ರಹಣ: ಭವ್ಯ ಸನ್ಮಾನ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಲ್ಲೂಕಿನ ಕಾಳಗಿ ಗ್ರಾಮದ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದ 'ಆರೋಗ್ಯ ರಕ್ಷಾ ಸಮಿತಿ'ಗೆ ನೂತನವಾಗಿ ನಾಮ ನಿರ್ದೇಶನಗೊಂಡ ನಾಲ್ವರು ಸದಸ್ಯರ ಸನ್ಮಾನ ಹಾಗೂ ಪದಗ್ರಹಣ ಕಾರ್ಯಕ್ರಮವು ಆಸ್ಪತ್ರೆಯ ಆವರಣದಲ್ಲಿ ಇತ್ತೀಚೆಗೆ ಜರುಗಿತು. ಸ್ಥಳೀಯ ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಾಬೂನು ಮತ್ತು ಮಾರ್ಜಕಗಳ ನಿಗಮದ ಅಧ್ಯಕ್ಷರಾದ ಸಿ.ಎಸ್. ನಾಡಗೌಡ (ಅಪ್ಪಾಜಿ) ಅವರ ಶಿಫಾರಸಿನ ಮೇರೆಗೆ ಮಾನ್ಯ ವಿಜಯಪುರ ಜಿಲ್ಲಾಧಿಕಾರಿಗಳು ಈ ನೇಮಕಾತಿ ಆದೇಶ ಹೊರಡಿಸಿದ್ದು, ಅದರಂತೆ ಕಾಳಗಿ ಗ್ರಾಮದ ಹಿರಿಯರು ಹಾಗೂ ಮುಖಂಡರಾದ ನಿಂಗಪ್ಪ ಬಂಡಿ (ಹಿಂದುಳಿದ ವರ್ಗ), ಮಾಬುಸಾ ಗಬೀರಸಾ ಮುಲ್ಲಾ (ಅಲ್ಪಸಂಖ್ಯಾತ), ಮಹಾಂತೇಶ ಭೀಮರಾಯ ಕಾಳಗಿ (ವಿಶೇಷ ಜಾತಿ) ಹಾಗೂ ಮಹಿಳಾ ಪ್ರತಿನಿಧಿಯಾಗಿ ರೇಖಾ ಪ್ರಮೋದ ಸಾಲೋಟಗಿ ಅವರು ನೂತನ ಸದಸ್ಯರಾಗಿ ನೇಮಕಗೊಂಡಿದ್ದಾರೆ.

ಇದೇ ಸಂದರ್ಭದಲ್ಲಿ ಸರ್ಕಾರದಿಂದ ನಾಮನಿರ್ದೇಶನಗೊಂಡು ಅಧಿಕಾರ ವಹಿಸಿಕೊಂಡ ನೂತನ ಸದಸ್ಯರನ್ನು ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿಗಳು, ಸಿಬ್ಬಂದಿ ವರ್ಗ ಹಾಗೂ ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷರಾದ ಜಾವೀದ್ ಇನಾಮದಾರ ಅವರ ನೇತೃತ್ವದಲ್ಲಿ ಶಾಲು ಹೊದಿಸಿ ಭವ್ಯವಾಗಿ ಸನ್ಮಾನಿಸಿ, ಅಭಿನಂದಿಸಲಾಯಿತು.

ಡಾ. ವಿಜಯಕುಮಾರ್ ಕಟಕದೊಂಡ ಅವರ ಅಧ್ಯಕ್ಷತೆಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಗ್ರಾಮದ ಪ್ರಮುಖರಾದ ಚಂದ್ರಕಾಂತ್ ಅಂಬಿಗೇರ, ಕಮಲಪ್ಪ ಉಂಡಿ, ಅಮಸಿದ್ದ ಡೋಣೂರ, ಜಾವೀದ ಇನಾಮದಾರ, ಗುರುನಾಥ್ ಜೋಶಿ, ಬಸವರಾಜ ದಿವಾನಿ, ಸಲೀಂ ಭಾಗವಾನ್, ಪ್ರಮೋದ ಸಾಲೋಟಗಿ, ಮಲ್ಲಪ್ಪ ದಿವಾನಿ, ಮಹಾದೇವಪ್ಪ ಹಳ್ಳದ, ಬಸವರಾಜ ಹಾದಿಮನಿ, ಮುದ್ದಪ್ಪ ಹಾದಿಮನಿ ಸೇರಿದಂತೆ ಆಸ್ಪತ್ರೆಯ ಸರ್ವ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ತಂಗಡಗಿ ಗ್ರಾಮದ ವಿಕಾಸಕ್ಕೆ ಕೈಜೋಡಿಸಿದ 52 ನರೇಗಾ ಕೂಲಿಕಾರರು



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ (ನರೇಗಾ) ಯೋಜನೆಯು ಗ್ರಾಮೀಣ ಭಾಗದ ಬಡ ಕುಟುಂಬಗಳಿಗೆ ಆರ್ಥಿಕ ಭದ್ರತೆ ಒದಗಿಸುವುದರ ಜೊತೆಗೆ, ಹಳ್ಳಿಗಳ ಸರ್ವಾಂಗೀಣ ಪ್ರಗತಿಗೆ ಮುನ್ನುಡಿ ಬರೆದಿದೆ" ಎಂದು ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರು (ಎಡಿ) ಹಾಗೂ ತಂಗಡಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ಎಸ್.ಎಸ್. ಗಣಾಚಾರಿ ತಿಳಿಸಿದರು.

ತಾಲೂಕಿನ ತಂಗಡಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ನಡೆಯುತ್ತಿರುವ ಪ್ರಗತಿ ಕಾಮಗಾರಿಗಳ ಸ್ಥಳಕ್ಕೆ ಜಂಟಿಯಾಗಿ ಭೇಟಿ ನೀಡಿ, ಪರಿಶೀಲನೆ ನಡೆಸಿ ಅವರು ಮಾತನಾಡಿದರು. ಪ್ರಸ್ತುತ ಈ ಕಾಮಗಾರಿಯಲ್ಲಿ ಗ್ರಾಮದ ಒಟ್ಟು 52 ಜನ ಕೂಲಿಕಾರರು ಅತ್ಯಂತ ಶ್ರಮ ಹಾಗೂ ಶ್ರದ್ಧೆಯಿಂದ ಕೆಲಸ ನಿರ್ವಹಿಸುತ್ತಿದ್ದಾರೆ.

**ಗ್ರಾಮದ ಮೂಲಸೌಕರ್ಯ ವೃದ್ಧಿಗೆ ಶ್ರಮ:**

ಗ್ರಾಮೀಣ ಭಾಗದ ಅಭಿವೃದ್ಧಿಗೆ ಸ್ಥಳೀಯರೇ ಕೈಜೋಡಿಸುತ್ತಿದ್ದು, ಮೂಲಸೌಕರ್ಯ ವೃದ್ಧಿ ಮತ್ತು ಪರಿಸರ ಸಂರಕ್ಷಣೆಯ ವಿವಿಧ ಕಾಮಗಾರಿಗಳಲ್ಲಿ ಕೂಲಿಕಾರರು ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಈ ಯೋಜನೆ ಉದ್ಯೋಗಾವಕಾಶ ಸೃಷ್ಟಿಸುವುದರೊಂದಿಗೆ ಗ್ರಾಮೀಣ ಕುಟುಂಬಗಳ ಜೀವನಮಟ್ಟವನ್ನು ಸುಧಾರಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ. ಕೂಲಿಕಾರರ ಪರಿಶ್ರಮದಿಂದಾಗಿ ತಂಗಡಗಿ ಗ್ರಾಮವು ಅಭಿವೃದ್ಧಿಯ ದಾರಿಗೆ ಹೆಜ್ಜೆ ಇಡುತ್ತಿದೆ ಎಂದು ಅಧಿಕಾರಿಗಳು ಹರ್ಷ ವ್ಯಕ್ತಪಡಿಸಿದರು.

ಕಾಮಗಾರಿ ಪರಿಶೀಲನೆ ವೇಳೆ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಆಹೋರಾತ್ರಿ ಶ್ರಮಿಸುತ್ತಿರುವ ಸಮಸ್ತ ಕೂಲಿಕಾರರು ಹಾಗೂ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಪರಶುರಾಮ ಚಲವಾದಿ,ಗ್ರಾಪಂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಭಯೋತ್ಪಾದನಾ ವಿರೋಧಿ ದಿನಾಚರಣೆ : ಪ್ರತಿಜ್ಞಾ ವಿಧಿ ಸ್ವೀಕಾರ



**ಬೆಳಗಾವಿ ವಾರ್ತೆ ಗದಗ :** ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ಭಯೋತ್ಪಾದನಾ ವಿರೋಧಿ ದಿನಾಚರಣೆಯ ಅಂಗವಾಗಿ ಹಿಂಸೆ ಮತ್ತು ಭಯೋತ್ಪಾದನೆ ಮೆಟ್ಟಿ ಶಾಂತಿ, ಸೌಹಾರ್ದತೆ ಕಾಪಾಡುವ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮ ಜರುಗಿತು.

ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಅಹಿಂಸೆ ಹಾಗೂ ಸಹನೆಗೆ ಹೆಸರಾದ ನಮ್ಮ ರಾಷ್ಟ್ರದ ಭವ್ಯಪರಂಪರೆಯಲ್ಲಿ ದೃಢ ವಿಶ್ವಾಸವುಳ್ಳ ನಾವು ಎಲ್ಲ ಬಗೆಯ ಭಯೋತ್ಪಾದನೆ ಮತ್ತು ಹಿಂಸೆಯನ್ನು ನಮ್ಮ ಶಕ್ತಿ ಸಾಮರ್ಥ್ಯದಿಂದ ಎದುರಿಸಿ ಶಾಂತಿ, ಸಾಮಾಜಿಕ ಸೌಹಾರ್ದತೆ ಸಾಧಿಸಿ ವಿಚ್ಛಿದ್ರಕಾರಿ ಶಕ್ತಿಗಳೊಡನೆ ಹೋರಾಡಲು ಪಣ ತೊಡುವ ಪ್ರಮಾಣ ವಚನ ಬೋಧಿಸಿದರು.

ಈ ಸಂದರ್ಭದಲ್ಲಿ ಡಿವೈಎಸ್‌ಪಿ ಮಹಾಂತೇಶ್ ಸಜ್ಜನರ, ವಿವಿಧ ಇಲಾಖೆಯ ಅಧಿಕಾರಿಗಳು, ಕಂದಾಯ ಇಲಾಖೆಯ ಶಿರಸ್ತೇದಾರರು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

# 'ಮದ್ದಾನೆ' ಚಿತ್ರದ ಟೈಟಲ್ ಮತ್ತು ಪೋಸ್ಟರ್ ಬಿಡುಗಡೆ ಮಾಡಿದ ಡಾ। ಶಿವರಾಜಕುಮಾರ್

**ಬೆಳಗಾವಿ ವಾರ್ತೆ ಬೆಂಗಳೂರು:** ಎಲ್ ಎಮ್ ಫಿಲ್ಮ್ಸ್ ಬೆಂಗಳೂರ ಅವರ "ಮದ್ದಾನೆ" ಕನ್ನಡ ಚಲನಚಿತ್ರದ ಟೈಟಲ್ ಲಾಂಚ್ ಮತ್ತು ಪೋಸ್ಟರ್ ಬಿಡುಗಡೆಯನ್ನು ಕರುನಾಡ ಚಕ್ರವರ್ತಿ ಡಾ। ಶಿವರಾಜಕುಮಾರ್ ಮತ್ತು ಗೀತಾ ಶಿವರಾಜಕುಮಾರ್ ಬಿಡುಗಡೆಗೆ ಮಾಡಿದರು.

ನಂತರ ಮಾತನಾಡಿ ಚಿತ್ರ ಯಶಸ್ವಿಯಾಗಲಿ ಎಂದು ಚಿತ್ರ ತಂಡಕ್ಕೆ ಶುಭ ಹಾರೈಸಿದರು. 'ಮದ್ದಾನೆ' ಚಿತ್ರದಲ್ಲಿ ಚಿಕ್ಕ ವಯಸ್ಸಿನಲ್ಲಿ ಮನೆ ಬಿಟ್ಟು ಹೋಗಿ, ಮುಂಬೈನಲ್ಲಿ ಆಂಟಿ–ಟೆರರಿಸಂ ಸ್ಕ್ವಾಡ್ ಆಗಿ ಲವ್ ಜಿಹಾದ್, ಡ್ರಗ್ಸ್ ಮಾಫೀಯಾ ದಂಧೆಯಲ್ಲಿ ಭಾಗಿಯಾದವರನ್ನು ಕಂಡು ಹಿಡಿಯಲು ರೌಡಿಸಂಗೆ ಇಳಿದು ಕಷ್ಟದಲ್ಲಿರುವ ತನ್ನ ಕುಟುಂಬವನ್ನ ಹೇಗೆ ರಕ್ಷಿಸಿಕೊಳ್ಳುತ್ತಾನೆ ಎಂಬುದನ್ನು ಹೇಳಿದ್ದು ಪ್ರೇಕ್ಷಕರು ಚಿತ್ರಮಂದಿರದಲ್ಲೇ ನೋಡಬೇಕು ಎಂದು ನಿರ್ದೇಶಕ ಕೆ.ರಾಜಶರಣ್ ಹೇಳಿದರು.

ನಾಯಕನಾಗಿ ಈ ಮೊದಲು "ಕ್ಯಾಂಪಸ್ ಕ್ರಾಂತಿ" ಯಲ್ಲಿ ಕಾಲೇಜ್ ಹುಡುಗನ ಪಾತ್ರದಲ್ಲಿ ಅಭಿನಯಿಸಿದ್ದ ಆರ್ಯರವರಿಗೆ ಇದು ಎರಡನೇ ಚಿತ್ರ, ಈ ಮೊದಲು "ಎಮ್ಮೆತಿಮ್ಮ", "ಮೊದಲ ಮಳೆ" ಚಿತ್ರಗಳಿಗೆ ಆಕ್ಷನ್ ಕಟ್ ಹೇಳಿದ್ದ ನಿರ್ದೇಶಕ ಕೆ ರಾಜಶರಣ್‌ರಿಗೆ ಇದು ಮೂರನೇ ಚಿತ್ರ, ಚಿತ್ರರಂಗಕ್ಕೆ ಒಳ್ಳೆಯ ಅಭಿರುಚಿಯ ಸಿನಿಮಾಗಳನ್ನು ಕೊಡಲು ಹದಿನೈದು ವರ್ಷದ ಹಿಂದೆ ಕಲ್ಯಾಣ ಕರ್ನಾಟಕದ ಸುರಪುರ ತಾಲೂಕಿನ ಜೋಗುಂಡಭಾವಿ ಗ್ರಾಮದಿಂದ ಮನೆ ತೊರೆದು ಬಂದು ಗಾಂಧಿನಗರದಲ್ಲಿ ಕನಸು ನನಸಾಗಿಸಿಕೊಂಡವರು.

ಬೆಂಗಳೂರು, ಮಂಡ್ಯ , ಮೈಸೂರಿನಲ್ಲಿ ಸುಮಾರು 30 ದಿನಗಳ ಕಾಲ ಚಿತ್ರೀಕರಣ ನಡೆಸಲಾಗಿದೆ, ತಾರಾಬಳಗದಲ್ಲಿ ಶ್ರೀನಿವಾಸ್‌ಮೂರ್ತಿ, ಲತಾಮೂರ್ತಿ, ರಾಣಿ, ಸುಜಾತ ಹೀರೆಮಠ, ಏಕಾಂಬರಂ, ಸುಧಾಕರ್, ರಾಮಕೃಷ್ಣ, ಪೂಜಿತ್ ಮೊದಲಾದವರು ಅಭಿನಯಿಸಿದ್ದಾರೆ. ತಾಂತ್ರಿಕ ವರ್ಗದಲ್ಲಿ ನಾಗಭೂಷಣ್




ಪೂಜಾರ್ ಛಾಯಾಗ್ರಹಣ, ಚಿತ್ರದಲ್ಲಿ ಮೂರು ಹಾಡುಗಳಿದ್ದು ಪ್ರಸನ್ನ ಭೋಜಶೆಟ್ಟರ್ ಸಂಗೀತ ಸಂಯೋಜಿಸಿದ್ದಾರೆ, ಡಾ.ಮಾರುತಿ ಎನ್.ಈ ಮತ್ತು ಎಸ್ ವಿ ಶಿವಕುಮಾರ್ ದಾವಣಗೆರೆ ಸಾಹಿತ್ಯ, ಸ್ಟಾರ್ ನಾಗಿಯವರ ನೃತ್ಯ ಸಂಯೋಜನೆ, ರಾಜೇಶ್ ಚೌಹಾಣ್ ಸಂಕಲನ , ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಗಿ , ಎಂ.ಜಿ.ಕಲ್ಲೇಶ ಪಿಆರ್.ಓ, ಸಹ ನಿರ್ಮಾಪಕರು ಡಾ.ಮಾರುತಿ ಎನ್.ಇ ಆಗಿದ್ದಾರೆ. ಶ್ರೀಮತಿ ಲತಾ ಮೂರ್ತಿಯವರು ಚಿತ್ರಕ್ಕೆ ಬಂಡವಾಳ ಹೂಡಿದ್ದು ಈಗ ಸೆನ್ಸಾರ್ ಮುಗಿಸಿಕೊಂಡು ಜೂನ್ 12 ಕ್ಕೆ ತೆರೆಗೆ ಬರಲು ಸಜ್ಜಾಗಿದೆ ಎಂದು ನಿರ್ಮಾಪಕಿ ಲತಾಮೂರ್ತಿ ತಿಳಿಸಿದರು.

# ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಧಾರವಾಡ:** 2026–27 ನೇ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿ ಪೋಷಕರ ವಾರ್ಷಿಕ ಆದಾಯ ಮಿತಿ ಪ್ರವರ್ಗ–1, ಎಸ್,ಸಿ ಮತ್ತು ಎಸ್.ಟಿ ರೂ,2.50 ಲಕ್ಷ ಪ್ರವರ್ಗ–1, 2ಎ, 2ಬಿ, 3ಎ, 3ಬಿ ಹಾಗೂ ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ರೂ1.00 ಲಕ್ಷ ಹೊಂದಿರಬೇಕು.

ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳು ಜೂನ್ 08, 2026 ರೊಳಗಾಗಿ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಜೂನ್ 15, 2026 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08362447961 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307 . Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001